ಸಂಪುಟ : 9 ಸಂಚಿಕೆ 243 ಪುಟ : 4 ಬೆಲೆ: 3.00 ಬುಧವಾರ ನವೆಂಬರ್ 6 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ

Volume : 9 Issue : 243 Pages : 4 Price : 3.00 Wednesday November 6 2024 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

ಕಾಂಗ್ರೆಸ್ ಅಧಿವೇಶನ ಶತಮಾನೋತ್ಸವ ಸಮಿತಿಯ ಸಭೆಯಲ್ಲಿ ಸಚಿವ ಎಚ್.ಕೆ. ಪಾಟೀಲ

ಅರ್ಥಪೂರ್ಣ ಶತಮಾನೋತ್ಸವ ಆಚರಣೆಗೆ ಸಿದ್ಧತೆ

■ ವಿಜಯಸಾಕ್ಷಿ ಸುದ್ದಿ, ಬೆಳಗಾವಿ

ಮಹಾತ್ಮ ಗಾಂಧೀಜಿಯವರ ಅಧ್ಯಕ್ಷತೆಯಲ್ಲಿ ಬೆಳಗಾವಿಯಲ್ಲಿ 1924ರಲ್ಲಿ ಜರುಗಿದ ಕಾಂಗ್ರೆಸ್ ಅಧಿವೇಶನನಕ್ಕೆ ನೂರು ವರ್ಷಗಳು ಪೂರ್ಣಗೊಳ್ಳುತ್ತಿರುವ ಹಿನ್ನೆಲೆಯಲ್ಲಿ ವರ್ಷವಿಡೀ ವಿವಿಧ ಬಗೆಯ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವ ಮೂಲಕ ಶತಮಾನೋತ್ಸವವನ್ನು ಅರ್ಥಪೂರ್ಣವಾಗಿ ಆಚರಿಸಲಾಗುವುದು ಎಂದು ಶತಮಾನೋತ್ಸವ ಸಮಿತಿಯ ಅಧ್ಯಕ್ಷರೂ ಆಗಿರುವ ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಪ್ರವಾಸೋದ್ಯಮ ಇಲಾಖೆಯ ಸಚಿವರಾದ ಎಚ್.ಕೆ. ಪಾಟೀಲ ತಿಳಿಸಿದರು.

ನಗರದ ಪ್ರವಾಸಿಮಂದಿರದಲ್ಲಿ ಮಂಗಳವಾರ ಜರುಗಿದ ಶತಮಾನೋತ್ಸವ ಸಮಿತಿಯ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಶತಮಾನೋತ್ಸವ ಆಚರಣೆ ಕೇವಲ ಬೆಳಗಾವಿ ಕೇಂದ್ರೀಕೃತವಾಗಿರುವುದಿಲ್ಲ. ಪ್ರತಿಯೊಂದು ಕಾರ್ಯಕ್ರಮಗಳನ್ನು ಇಡೀ ರಾಜ್ಯದಾದ್ಯಂತ ಹಮ್ಮಿಕೊಳ್ಳಲಾಗುವುದು. ಅಧಿವೇಶನ ಹಾಗೂ ಗಾಂಧೀಜಿಯವರ ಜೀವನ ಸಾಧನೆ ಕುರಿತು ದೊಡ್ಡ ಪ್ರಮಾಣದಲ್ಲಿ ಛಾಯಾಚಿತ್ರ ಪ್ರದರ್ಶನ ಆಯೋಜಿಸಲಾಗುವುದು. ಎಲ್ಲ ಜಿಲ್ಲಾ ಕೇಂದ್ರಗಳಲ್ಲಿ ಗಾಂಧಿ ಭವನ ಪೂರ್ಣಗೊಳಿಸಬೇಕಿದೆ ಎಂದರು.

ಅರ್ಥಪೂರ್ಣ, ರಚನಾತ್ಮಕ ಕಾರ್ಯಕ್ರಮ ಆಯೋಜಿಸಲು ಗಾಂಧೀವಾದಿಗಳು, ಹಿರಿಯರೊಂದಿಗೆ ಚರ್ಚಿಸಿ ಅಧಿವೇಶನದ ಇತಿಹಾಸ ಮರುಸೃಷ್ಟಿ ಮತ್ತು ಮೆಲುಕು ಹಾಕಲು ಶತಮಾನೋತ್ಸವ ಆಚರಣೆ ಮಾಡಲಾಗುವುದು. ಕಾಂಗ್ರೆಸ್ ಅಧಿವೇಶನಕ್ಕೆ ಸಾಕ್ಷಿಯಾದ ಸ್ಥಳಗಳಿಗೆ ಭೇಟಿ ನೀಡಿ, ವಿಸ್ತೃತವಾಗಿ ಚರ್ಚಿಸಿದ ಬಳಿಕ ಕಾರ್ಯಕ್ರಮದ ರೂಪುರೇಷೆ ಸಿದ್ಧಪಡಿಸಲಾಗುವುದು. ಅಕ್ಟೋಬರ್ 2ರಿಂದ ಒಂದು ವರ್ಷಗಳ ಕಾಲ ಶತಮಾನೋತ್ಸವ ವರ್ಷಾಚರಣೆ ಆಯೋಜಿಸಲಾಗುವುದು. ಅಂತಾರಾಷ್ಟ್ರೀಯ ಮಹತ್ವ ಪಡೆಯಲು ವಿಧಾನಮಂಡಳ ಜಂಟಿ ಅಧಿವೇಶನ ನಡೆಸಲು ಹಾಗೂ ಅಮೆರಿಕಾ ಮಾಜಿ ಅಧ್ಯಕ್ಷ ಬರಾಕ್ ಒಬಾಮಾ ಅವರನ್ನು ಕರೆಸಲು ಉದ್ದೇಶಿಸಲಾಗಿದೆ ಎಂದರಲ್ಲದೆ, ಬೆಳಗಾವಿ ಅಧಿವೇಶನ ಕುರಿತು ಸ್ಥಳೀಯ ನಾಟಕಕಾರರು ಒಂದು ವಿಶೇಷ ನಾಟಕವನ್ನು ರಚಿಸುವಂತೆ ಸಚಿವ ಎಚ್.ಕೆ. ಪಾಟೀಲ ತಿಳಿಸಿದರು.

ಇದೇ ವೇಳೆ ಮಾತನಾಡಿದ ಮಾಜಿ ಮುಖ್ಯಮಂತ್ರಿ ಹಾಗೂ ಶತಮಾನೋತ್ಸವ ಸಮಿತಿಯ ಗೌರವ ಅಧ್ಯಕ್ಷರಾದ ವೀರಪ್ಪ ಮೊಯ್ಲಿ, ಶತಮಾನೋತ್ಸವವನ್ನು ಸ್ಮರಣೀಯವಾಗಿಸಲು ಶತಮಾನೋತ್ಸವ ಉದ್ಯಾನ ಮತ್ತು ಭವನ ನಿರ್ಮಾಣ ಮಾಡಬೇಕಿದೆ. ಇದಲ್ಲದೇ ಮಹಾತ್ಮಾ ಗಾಂಧಿ ಪುತ್ಥಳಿ ನಿರ್ಮಾಣ, ಅಧಿವೇಶನ ಸ್ಥಳದಲ್ಲಿ ಗಾಂಧಿ ಸ್ಮಾರಕ, ಛಾಯಾಚಿತ್ರ ಹಾಗೂ ವಸ್ತುಪ್ರದರ್ಶನ ಹಾಗೂ ಖಾಯಂ ಮ್ಯೂಸಿಯಂ ಸ್ಥಾಪಿಸಬೇಕು ಎಂದು ಸಭೆಯಲ್ಲಿ ತಿಳಿಸಿದರು.

ಶತಮಾನೋತ್ಸವ ಸಮಿತಿಯ ಸಂಚಾಲಕರಾದ ವಿಧಾನಪರಿಷತ್ ಮಾಜಿ ಸಭಾಪತಿ ಬಿ.ಎಲ್.ಶಂಕರ ಅವರು, ಅಧಿವೇಶನದ ಶತಮಾನೋತ್ಸವವು ಒಂದು ವರ್ಷದ ಕಾರ್ಯಕ್ರಮ. ಮುಂದಿನ ಅಕ್ಟೋಬರ್ 2ರವರೆಗಿನವರೆಗೆ ಅಳವಡಿಸಿಕೊಳ್ಳಲಾಗುವುದು ಎಂದು ವಿವರಿಸಿದರು.

ಹಿರಿಯ ಸಾಹಿತಿ ಡಾ.ಸರಜೂ ಕಾಟ್ಕರ್, ದೇಶಪಾಂಡೆ ಸ್ಮಾರಕ ಟ್ರಸ್ಟ್ ಅಧ್ಯಕ್ಷರಾದ ರವೀಂದ್ರ ದೇಶಪಾಂಡೆ, ಪ್ರೊ.ಮರಾಠೆ, ನಿಲೇಶ್ ಬೇನಾಳ ಮತ್ತಿತರರು ಕಾಂಗ್ರೆಸ್ ಅಧಿವೇಶನದ ಶತಮಾನೋತ್ಸವವನ್ನು ಅರ್ಥಪೂರ್ಣವಾಗಿ ಆಚರಿಸುವ ಬಗ್ಗೆ ಸಲಹೆಗಳನ್ನು ನೀಡಿದರು. ಜಿಲ್ಲಾ ಉಸ್ತುವಾರಿ ಸಚಿವರಾದ ಸತೀಶ್ ಜಾರಕಿಹೊಳಿ, ಬೆಳಗಾವಿ ಉತ್ತರ ಶಾಸಕರಾದ ಆಸಿಫ್ (ರಾಜು) ಸೇಠ್, ಜಿಲ್ಲಾಧಿಕಾರಿ ಮೊಹಮ್ಮದ್ ರೋಷನ್, ಜಿ.ಪಂ ಸಿಇಓ ರಾಹುಲ್ ಶಿಂಧೆ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ಭೀಮಾಶಂಕರ ಗುಳೇದ, ಸಮಿತಿಯ ಸದಸ್ಯರಾದ ಎನ್. ಆರ್. ವಿಶುಕುಮಾರ್ ಮತ್ತಿತರರು ಸಭೆಯಲ್ಲಿ ಉಪಸ್ಥಿತರಿದ್ದರು.

ಅಧಿವೇಶನ ಸ್ಥಳ-ಹುದಲಿ ಭೇಟಿ

ಸಭೆಯ ಬಳಿಕ ಸಮಿತಿಯ ಅಧ್ಯಕ್ಷರು, ಗೌರವ ಅಧ್ಯಕ್ಷರು, ಸಂಚಾಲಕರು, ಸದಸ್ಯರು ಕಾಂಗ್ರೆಸ್ ಅಧಿವೇಶನ ನಡೆದ ಸ್ಥಳವಾದ ಟಿಳಕವಾಡಿ, ವೀರಸೌಧಕ್ಕೆ ಭೇಟಿ ನೀಡಿದರು. ಈ ಸಂದರ್ಭದಲ್ಲಿ ಛಾಯಾಚಿತ್ರ ಪ್ರದರ್ಶನ ಹಾಗೂ ಕಾಂಗ್ರೆಸ್ ಬಾವಿಯನ್ನು ವೀಕ್ಷಿಸಿ, ಜಿಲ್ಲಾಧಿಕಾರಿಗಳಿಂದ ಮಾಹಿತಿಯನ್ನು ಪಡೆದುಕೊಂಡರು.

ನಂತರ ಲೆಲೆ ಮೈದಾನ, ಸಿಪಿಎಡ್ ಮೈದಾನ, ಕಣಬರಗಿಯಲ್ಲಿರುವ ಗಂಗಾಧರರಾವ್ ದೇಶಪಾಂಡೆ ಸ್ಮಾರಕ ಮತ್ತು ಹುದಲಿಯಲ್ಲಿರುವ ಮಹಾತ್ಮಾ ಗಾಂಧೀಜಿ ಸ್ಮಾರಕವನ್ನು ವೀಕ್ಷಿಸಿದರು.

ಈ ಸಂದರ್ಭದಲ್ಲಿ ಶತಮಾನೋತ್ಸವ ಸಮಿತಿಯ ಅಧ್ಯಕ್ಷರಾದ ಎಚ್.ಕೆ. ಪಾಟೀಲ, ಜಿಲ್ಲಾ ಉಸ್ತುವಾರಿ ಸಚಿವರಾದ ಸತೀಶ್ ಜಾರಕಿಹೊಳಿ, ಗೌರವ ಅಧ್ಯಕ್ಷರಾದ ವೀರಪ್ಪ ಮೊಯ್ಲಿ, ಸಮಿತಿಯ ರಾಜ್ಯ ಸಂಚಾಲಕರಾದ ವಿಧಾನ ಪರಿಷತ್ ಮಾಜಿ ಸಭಾಪತಿ ಬಿ.ಎಲ್. ಶಂಕರ, ಸದಸ್ಯರಾದ ಎನ್.ಆರ್. ವಿಶುಕುಮಾರ್, ಬೆಳಗಾವಿ ಉತ್ತರ ಮತಕ್ಷೇತ್ರದ ಶಾಸಕರಾದ ಆಸಿಫ್(ರಾಜು) ಸೇಠ್, ವಿನಯ ನಾವಲಗಟ್ಟಿ, ಶಿವನಗೌಡ ಪಾಟೀಲ, ರಮೇಶ ಜನಗಲ, ರಾಮಕೃಷ್ಣ ಮರಾಠೆ ಮತ್ತಿತರರು ಉಪಸ್ಥಿತರಿದ್ದರು.

ಗದಗ-ಬೆಟಗೇರಿ: ನೀರು ಪೂರೈಕೆ ವಿವರ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ಅವಳಿ ನಗರದಲ್ಲಿ ನವೆಂಬರ್ 6 ರಂದು ಈ ಕೆಳಗಿನ ಸ್ಥಳಗಳಿಗೆ ನೀರು ಪೂರೈಕೆ ಮಾಡಲಾಗುವುದು ಎಂದು ನಗರಸಭೆ ಅಧಿಕಾರಿಗಳು ತಿಳಿಸಿದ್ದಾರೆ.

ಸ್ಥಳಗಳ ವಿವರ : ವಾರ್ಡ್ ನಂ. 22 – ಕನ್ನಡ ಶಾಲೆ, ಶುದ್ಧ ನೀರಿನ ಘಟಕದ ಲೈನ್ 1 ರಿಂದ 5 ವರೆಗಿನ ಲೈನ್‌ಗಳು ಉಳಿದ ಕೆಲವು ಭಾಗಗಳು. ವಾರ್ಡ್ ನಂ. 23 – ಗೆಳೆಯರ ಬಳಗ, ಲಕ್ಕುಂಡಿ, ಮಾನ್ವಿ, ಅಕ್ಕಿ, ಬಾಳಿಕಾಯಿ, ಜಂಪ್ಲಿ ಮತ್ತು ಕುಂಬಾರ ಲೈನ್‌ಗಳು, ಗಣಪತಿ ಗುಡಿ ಉಳಿದ ಕೆಲವು ಭಾಗಗಳು.

ವಾರ್ಡ್ ನಂ. 29 – ಕಲಾಮಂದಿರ ರೋಡ್, ದೇವರಾಜ ಅರಸು ಹಾಸ್ಟೆಲ್ ಲೈನ್, ಸಾಯಿನಗರ ಉಳಿದ ಕೆಲವು ಭಾಗಗಳು. ವಾರ್ಡ್ ನಂ. 27, 28 – ಮೆಹರವಾಡೆ, ಮುಳುಗುಂದ, ಲಕ್ಕಣ್ಣವರ, ಕುಲಕರ್ಣಿ, ಹೊಸಮನಿ, ಕೊಪ್ಪದ, ಮಲ್ಲಾಡದ ಮತ್ತು ಸಿ ಎಸ್ ಪಾಟೀಲ್ ಲೈನ್‌ಗಳು, ನಾಗರಕಟ್ಟಿ, ವೆಂಕಟೇಶ್ ಟಾಕೀಸ್, ಸ್ಟೇಡಿಯಂ, ರೊಟ್ಟಿ ಲೇಔಟ್, ತಂಬ್ರಳ್ಳಿಮಠದ ಲೈನ್, ನಂದೀಶ್ವರ ಮಠದ ಲೈನ್ ಉಳಿದ ಕೆಲವು ಭಾಗಗಳು.

ವಾರ್ಡ್ ನಂ. 3 – ಬಣ್ಣದ ನಗರ, ರಾಜಾಜಿ ರಸ್ತೆ, ಮೆಂಬರ್ ಲೈನ್, ಕುಂಬಾರ ಓಣಿ, ಕೆಇಬಿ ರೋಡ್, ಮಿಷನ್ ಕಾಂಪೌಂಡ್, ಭಾಗ-1,2 , ಹುಯಿಲಗೋಳ ಭಾಗ-1,2,3,4 , ಅಯ್ಯಪ್ಪಜ್ಜನ ಗದ್ದುಗೆ, ಮಸೂತಿ ಲೈನ್ ಉಳಿದ ಕೆಲವು ಭಾಗಗಳು. ವಾರ್ಡ್ ನಂ. 6, 7 – ಮಾಕಾ, ಪವಾರ ಲೈನ್, ಮಿಸ್ಕಿನ್ ಪ್ಲಾಟ್, ಪಿಪಿ ಗುಡಿ ಉಳಿದ ಕೆಲವು ಭಾಗಗಳು.

ತುಂಗಭದ್ರಾ ನದಿಯಿಂದ ಪೂರೈಕೆ ಮಾಡಿದ ನೀರನ್ನು ಸಂಗ್ರಹಣೆ ಮಾಡಿದ ನಂತರ ಹೊಸ ನೀರು ಸಂಗ್ರಹವಾಗಿರುವುದರಿಂದ ಕಡ್ಡಾಯವಾಗಿ ಕಾಯಿಸಿ ಆರಿಸಿ ಕುಡಿಯಲು ಉಪಯೋಗಿಸತಕ್ಕದ್ದು ಎಂದು ಗದಗ-ಬೆಟಗೇರಿ ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಆಕ್ಷೇಪಣೆಗೆ ನ.15 ಕೊನೆಯ ದಿನ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲೆಯ ರಾಷ್ಟ್ರೀಯ ಆರೋಗ್ಯ ಅಭಿಯಾನದಡಿಯಲ್ಲಿ ಖಾಲಿ ಇರುವ ಗುತ್ತಿಗೆ ಆಧಾರದ ಮೇಲೆ ಕರ್ತವ್ಯ ನಿರ್ವಹಿಸಲು ಕಿರಿಯ ಪ್ರಾಥಮಿಕ ಆರೋಗ್ಯ ಸುರಕ್ಷಾಧಿಕಾರಿ ಹುದ್ದೆ ಹಾಗೂ ಪಿಎಮ್ ಅಭಿಮ್ ಕಾರ್ಯಕ್ರಮದಡಿಯಲ್ಲಿ ಕಿರಿಯ ಆರೋಗ್ಯ ಸಹಾಯಕ ಹುದ್ದೆಗಳನ್ನು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಜಿಲ್ಲಾ ಪಂಚಾಯತ್, ಗದಗ ಹಾಗೂ ಅಧ್ಯಕ್ಷರು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಂಘ, ಗದಗ ಇವರ ಅನುಮೋದನೆ ಮೇರೆಗೆ ನೇಮಕಾತಿ ಮಾಡಿಕೊಳ್ಳಲು ಅರ್ಹ ಅಭ್ಯರ್ಥಿಗಳಿಂದ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ ಕಚೇರಿ ಗದಗನಲ್ಲಿ ಅರ್ಜಿ ಆಹ್ವಾನಿಸಲಾಗಿತ್ತು,

ಸದರಿ ಹುದ್ದೆಗಳಿಗೆ ಅರ್ಜಿಯೊಂದಿಗೆ ಲಗತ್ತಿಸಿದ ದಾಖಲಾತಿಗಳನ್ನು ಪರಿಶೀಲಿಸಲಾಗಿದ್ದು, ಈ ಪಟ್ಟಿಯನ್ನು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ ಕಚೇರಿ ಗದಗ ಇವರ ಸೂಚನಾ ಫಲಕದಲ್ಲಿ ಲಗತ್ತಿಸಲಾಗಿದೆ.

ಸದರಿ ಹುದ್ದೆಗಳ ದಾಖಲಾತಿಗಳಲ್ಲಿ ಯಾವುದೇ ಆಕ್ಷೇಪಣೆಗಳಿದ್ದಲ್ಲಿ, ರಜಾ ದಿನಗಳನ್ನು ಹೊರತುಪಡಿಸಿ ನವೆಂಬರ್ 15 ರ ಸಂಜೆ 4 ಗಂಟೆಯೊಳಗೆ ಲಿಖಿತ ರೂಪದಲ್ಲಿ ಸಲ್ಲಿಸಬಹುದಾಗಿದೆ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಂಘದ ಆಯ್ಕೆ ಸಮಿತಿಯ ಸದಸ್ಯ ಕಾರ್ಯದರ್ಶಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಗಜೇಂದ್ರಗಡ ತಹಸೀಲ್ದಾರರಿಗೆ ನಿಂದನೆ, ಕರ್ತವ್ಯಕ್ಕೆ ಅಡ್ಡಿ । ಕಂದಾಯ ಇಲಾಖೆ ನೌಕರರ ಸಂಘದಿಂದ ಕ್ರಮಕ್ಕೆ ಮನವಿ

ಕಳಕಪ್ಪ ಬಂಡಿ ನಡೆಗೆ ಖಂಡನೆ

■ ವಿಜಯಸಾಕ್ಷಿ ಸುದ್ದಿ, ಗದಗ

ಸೋಮವಾರ ಗಜೇಂದ್ರಗಡದಲ್ಲಿ ನಡೆದ ಬಿಜೆಪಿ ಪ್ರತಿಭಟನೆಯ ವೇಳೆ ಪ್ರತಿಭಟನಾಕಾರರಿಂದ ಮನವಿ ಸ್ವೀಕರಿಸಲು ಆಗಮಿಸಿದ ತಾಲೂಕು ದಂಡಾಧಿಕಾರಿಗಳೂ ಆಗಿರುವ ತಹಸೀಲ್ದಾರ ಕಿರಣಕುಮಾರ ಕುಲಕರ್ಣಿ ಅವರನ್ನು ಸಾರ್ವಜನಿಕವಾಗಿಯೇ ವೈಯಕ್ತಿಕವಾಗಿ ಏಕವಚನದಿಂದ ನಿಂದಿಸಿದ ಮಾಜಿ ಶಾಸಕ ಕಳಕಪ್ಪ ಬಂಡಿ ಅವರ ನಡೆಯನ್ನು ಕರ್ನಾಟಕ ಸರ್ಕಾರಿ ಕಂದಾಯ ಇಲಾಖೆ ನೌಕರರ ಸಂಘದ ಗದಗ ಜಿಲ್ಲಾ ಘಟಕ ತೀವ್ರವಾಗಿ ಖಂಡಿಸಿದೆ.

ಈ ಕುರಿತು ಸಂಘದ ಜಿಲ್ಲಾಧ್ಯಕ್ಷ ಡಿ.ಟಿ. ವಾಲ್ಮೀಕಿ ನೇತೃತ್ವದಲ್ಲಿ ಮಂಗಳವಾರ ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಿದರು. ವಕ್ಫ್ ನಡೆ ಹಾಗೂ ರಾಜ್ಯ ಸರ್ಕಾರದ ವಿರುದ್ಧ ಬಿಜೆಪಿ ರಾಜ್ಯದ ಎಲ್ಲ ತಾಲೂಕು ಕೇಂದ್ರಗಳಲ್ಲಿ ಪ್ರತಿಭಟನೆಗೆ ಕರೆ ನೀಡಿತ್ತು. ಇದರ ಭಾಗವಾಗಿ ಗಜೇಂದ್ರಗಡದಲ್ಲೂ ಪ್ರತಿಭಟನೆ ನಡೆದಿದೆ. ಆದರೆ, ಪ್ರತಿಭಟನೆ ನಂತರ ಮನವಿ ಸ್ವೀಕರಿಸಲು ಆಗಮಿಸಿದ ತಹಸೀಲ್ದಾರ ಕಿರಣಕುಮಾರ ಕುಲಕರ್ಣಿ ಅವರನ್ನು ಪ್ರತಿಭಟನೆಯಲ್ಲಿ ಭಾಗವಹಿಸಿದ್ದ ಮಾಜಿ ಶಾಸಕ ಕಳಕಪ್ಪ ಬಂಡಿ ಸಾರ್ವಜನಿಕವಾಗಿಯೇ ವೈಯಕ್ತಿಕವಾಗಿ ಏಕವಚನದಿಂದ ನಿಂದಿಸಿದ್ದಾರೆ. ಅಲ್ಲದೆ, ಕಂದಾಯ ಇಲಾಖೆಯ ಅಧಿಕಾರಿ/ನೌಕರರಿಗೆ ಸರ್ಕಾರಿ ಕರ್ತವ್ಯ ನಿರ್ವಹಿಸಲು ತೊಂದರೆಯುಂಟು ಮಾಡಿದ್ದಾರೆ ಎಂದು ಆರೋಪಿಸಿದರು.

ಸರ್ಕಾರದ ನಿಯಮಗಳಿಗೆ ಅನುಗುಣವಾಗಿ ಕರ್ತವ್ಯ ನಿರ್ವಹಿಸುತ್ತಿರುವ ಕಂದಾಯ ಇಲಾಖೆಯ ಅಧಿಕಾರಿ/ನೌಕರರಿಗೆ ತೊಂದರೆ ನೀಡಿ, ನಿಷ್ಪಕ್ಷಪಾತವಾಗಿ ಸರ್ಕಾರಿ ಕರ್ತವ್ಯ ನಿರ್ವಹಿಸಲು ಮಾನಸಿಕವಾಗಿ ಮತ್ತು ನೈತಿಕವಾಗಿ ಕುಗ್ಗಿಸುವ ರೀತಿಯಲ್ಲಿ ನಡೆದುಕೊಂಡಿದ್ದು ಖೇದಕರ. ಪ್ರತಿದಿನ ಸಾರ್ವಜನಿಕ ಸೇವೆಯಲ್ಲಿ ನಿರತರಾಗಿರುವ ಇಲಾಖೆಯ ಅಧಿಕಾರಿ ಹಾಗೂ ನೌಕರರಿಗೆ ಸೂಕ್ತ ರಕ್ಷಣೆಯನ್ನು ಒದಗಿಸಬೇಕು. ಜೊತೆಗೆ ಸರ್ಕಾರಿ ಕರ್ತವ್ಯ ನಿರ್ವಹಿಸಲು ತೊಂದರೆಯುಂಟು ಮಾಡಿದ ಮಾಜಿ ಶಾಸಕ ಕಳಕಪ್ಪ ಬಂಡಿ ಅವರ ವಿರುದ್ಧ ಸಕಾರದ ನಿಯಮದನ್ವಯ ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ಜಿಲ್ಲಾಧಿಕಾರಿ ಗೋವಿಂದರೆಡ್ಡಿ ಮನವಿಯನ್ನು ಸ್ವೀಕರಿಸಿದರು. ಈ ಸಂದರ್ಭದಲ್ಲಿ ಗದಗ ತಹಸೀಲ್ದಾರ ಶ್ರೀನಿವಾಸಮೂರ್ತಿ ಕುಲಕರ್ಣಿ, ಕರ್ನಾಟಕ ಸರ್ಕಾರಿ ಕಂದಾಯ ಇಲಾಖೆ ನೌಕರರ ಸಂಘದ ಗದಗ ಜಿಲ್ಲಾ ಘಟಕದ ಗೌರವ ಅಧ್ಯಕ್ಷ ಎಸ್.ಎಂ. ಹಿರೇಮಠ, ಪ್ರಧಾನ ಕಾರ್ಯದರ್ಶಿ ಎಫ್.ಎಸ್. ಗೌಡರ, ಉಪಾಧ್ಯಕ್ಷ ಬಿ.ಎಸ್. ಕನ್ನೂರ, ಎಂ.ಎ. ನದಾಫ್, ಖಜಾಂಚಿ ಕೆ.ಎಚ್. ಓಲೇಕಾರ, ಸಲಹಾ ಸಮಿತಿ ಅಧ್ಯಕ್ಷ ಎನ್.ಐ. ದೊಡ್ಡಮನಿ, ರಾಜ್ಯ ಪರಿಷತ್ ಸದಸ್ಯರಾದ ಎಸ್. ಎಸ್. ಕಡಗದ, ಬಿ.ವಿ. ಕಾಸಾರ, ಜಂಟಿ ಕಾರ್ಯದರ್ಶಿ ಎಂ.ವಿ. ಪೊಲೀಸಪಾಟೀಲ, ಜಿಲ್ಲಾ ಸಂಘಟನಾ ಕಾರ್ಯದರ್ಶಿ ಎಸ್.ಸಿ. ಹೊಸಕೋಟಿ, ಮಹಿಳಾ ಸಂಘಟನಾ ಕಾರ್ಯದರ್ಶಿ ಜಿ.ಬಿ. ಆನಂದಪ್ಪನವರ, ಸಾಂಸ್ಕೃತಿಕ ಕಾರ್ಯದರ್ಶಿ ಜಿ.ಪಿ. ಪಾಟೀಲ, ಕ್ರೀಡಾ ಕಾರ್ಯದರ್ಶಿ ಜೆ.ಎಚ್. ಭಜಂತ್ರಿ, ಆರ್.ವಾಯ್. ವಿಕ್ರಂ, ಸಹ-ಕಾರ್ಯದರ್ಶಿಗಳಾದ ವಿವೇಕ ಎಸ್. ಡಿಸ್ಲೆ, ಎಸ್.ಎ. ಪಾಟೀಲ, ಅರುಣಗೌಡ ಬಿ.ಮಂಟೂರ ಸೇರಿ ಅನೇಕರು ಇದ್ದರು.

> ಶಾಸಕ-ಸಚಿವರಾಗಿದ್ದವರು, ಸಾರ್ವಜನಿಕ ಜೀವನದಲ್ಲಿದ್ದವರು ಅಧಿಕಾರಿಗಳೊಂದಿಗೆ, ಅದರಲ್ಲೂ ತಾಲೂಕು ದಂಡಾಧಿಕಾರಿಗಳೊಂದಿಗೆ ನಡೆದುಕೊಂಡ ರೀತಿ ಖಂಡನೀಯ. ಇಂತಹ ಘಟನೆ ಯಾವುದೇ ಅಧಿಕಾರಿ ಅಥವಾ ನೌಕರರ ಮೇಲೆ ಮರುಕಳಿಸದಂತೆ ತಪ್ಪಿತಸ್ಥರ ಮೇಲೆ ಸೂಕ್ತ ಕ್ರಮಕ್ಕೆ ಒತ್ತಾಯಿಸಿ ಜಿಲ್ಲಾಧಿಕಾರಿಗಳಿಗೆ ಮನವಿ ನೀಡಿದ್ದೇವೆ.
>
> – ಡಿ.ಟಿ. ವಾಲ್ಮೀಕಿ.
> ಕರ್ನಾಟಕ ಸರ್ಕಾರಿ ಕಂದಾಯ ಇಲಾಖೆ ನೌಕರರ ಸಂಘದ ಜಿಲ್ಲಾಧ್ಯಕ್ಷ.

ಅನ್ನದಾನೇಶ್ವರ ಸಂಸ್ಥಾನಮಠದ ಆಸ್ತಿಯೂ ವಕ್ಫ್ ಆಸ್ತಿ ಎಂದು ನಮೂದು! ಭಕ್ತರಿಗೆ ಆಘಾತ

ಶ್ರೀಮಠದಿಂದ ಕಾನೂನು ಕ್ರಮ

■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಹೈದರಾಬಾದ್ ಕರ್ನಾಟಕದ ಶೈಕ್ಷಣಿಕ ಹೆಬ್ಬಾಗಿಲು ಎಂದೇ ಖ್ಯಾತವಾದ ನರೇಗಲ್ಲದ ಶ್ರೀ ಅನ್ನದಾನೇಶ್ವರ ಶಿಕ್ಷಣ ಸಂಸ್ಥೆಗಳಿಗೆ ಹಾಲಕೆರೆಯ ಶ್ರೀ ಅನ್ನದಾನ ವಿಜಯ ವಿದ್ಯಾ ಪ್ರಸಾರಕ ಸಮಿತಿ ಮಾತೃ ಸಂಸ್ಥೆ, ಈ ಸಂಸ್ಥೆಯ ಅಡಿಯಲ್ಲಿ ನಡೆಯುತ್ತಿರುವ ಕೆವಿ ಮತ್ತು ಬಿಎಂ ಉಚಿತ ಪ್ರಸಾದ ನಿಲಯದ ಒಟ್ಟು 15.06 ಎಕರೆಯಲ್ಲಿ 11.19 ಎಕರೆ ವಕ್ಫ್ ಆಸ್ತಿ ಎಂದು ನಮೂದಾಗಿರುವುದು ಸದ್ಭಕ್ತರ ಆಕ್ರೋಶಕ್ಕೆ ಕಾರಣವಾಗಿದೆ.

ಸ್ವಾತಂತ್ರ್ಯ ಪೂರ್ವದಲ್ಲಿಯೇ ಶಿಕ್ಷಣ ಸಂಸ್ಥೆಯನ್ನು ಪ್ರಾರಂಭಿಸಿದ ಈ ಸಂಸ್ಥೆಯ ಉಚಿತ ಪ್ರಸಾದ ನಿಲಯದ ಸರ್ವೆ ನಂ: 410/2ಬಿ ಆಸ್ತಿಯಲ್ಲಿ ರಹಮಾನ ಶಾವಲಿ ದರ್ಗಾ ವಕ್ಫ್ ಆಸ್ತಿ ಎಂದು ನೋಂದಣಿಯಾಗಿದೆ. ಲಿಂ. ಡಾ. ಅಭಿನವ ಅನ್ನದಾನ ಮಹಾಸ್ವಾಮಿಗಳು ಶ್ರೀಮಠದ ಪೀಠಾಧಿಪತಿಗಳಾಗಿದ್ದಾಗ ಪಹಣಿಯ ಕಾಲಂ ನಂ

ಸಂಪಾದಕೀಯ

ಸರ್ಕಾರಕ್ಕೆ ಕಂಟಕವಾದ ಸಚಿವರು

ರಾಜ್ಯ ಕಾಂಗ್ರೆಸ್ ಸರಕಾರಕ್ಕೆ ಗೌರವ ಘನತೆ ತಂದುಕೊಡಬೇಕಾದ ಸಚಿವರಿಂದಲೇ ಸರಕಾರಕ್ಕೆ ಕೆಟ್ಟ ಹೆಸರು ಬರುತ್ತಿದೆ. ಜನ ಸೇವೆ ಮಾಡಬೇಕು ಎನ್ನುವ ಕಾರಣಕ್ಕೆ ರಾಜಕಾರಣದಲ್ಲಿ ಇದ್ದೆನೆ ಎನ್ನುತ್ತಲೇ ಜನರ ಸುಲಿಗೆ ಮಾಡುವ ಕಾಯಕದಲ್ಲಿ ಸಚಿವರು ನಿರತರಾಗಿದ್ದಾರೆ.

ಇದು ಅಬಕಾರಿ ಸಚಿವ ಆರ್.ಬಿ. ತಿಮ್ಮಾಪುರ ಅವರ ಕಥೆ. ಅಬಕಾರಿ ಸಚಿವರು ಲಂಚಬಾಕತನ ಹಾಗೂ ಭ್ರಷ್ಟಾಚಾರದ ವಿರುದ್ಧ ಮದ್ಯದಂಗಡಿ ಮಾಲೀಕರು ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ರಾಜ್ಯಪಾಲರಿಗೆ ದೂರು ನೀಡಿದ್ದು, ರಾಜ್ಯ ರಾಜಕಾರಣದ ಇತಿಹಾಸದಲ್ಲಿ ಇದೇ ಮೊದಲು ಇರಬೇಕು. ಮದ್ಯದಂಗಡಿ ಮಾಲೀಕರು ಅಬಕಾರಿ ಸಚಿವರ ವಿರುದ್ಧ ಇಷ್ಟೊಂದು ಗಂಭೀರ ಆರೋಪ ಮಾಡಿದಾಗಲೂ ಯಾವುದೇ ಸ್ಪಂದನೆ ವ್ಯಕ್ತವಾಗದ ಹಿನ್ನೆಲೆಯಲ್ಲಿ ಇದೇ ನವೆಂಬರ್ 20 ರಂದು ರಾಜ್ಯಾದ್ಯಂತ ಮದ್ಯದಂಗಡಿ ಬಂದ್ ಮಾಡುವ ನಿರ್ಧಾರ-ಕ್ಕೆ ಬಂದಿದ್ದಾರೆ. ಸಚಿವರೊಬ್ಬರ ಕಿರುಕುಳು ಭ್ರಷ್ಟಾಚಾರಕ್ಕೆ ಬೇಸತ್ತು ಮದ್ಯದಂಗಡಿಕಾರರು ಬಂದ್ ಕರೆ ನೀಡಿರುವುದು ಇದೇ ಮೊದಲು.

ಹೀಗೆ ಅಬಕಾರಿ ಸಚಿವರ ನಡೆಯಿಂದ ಮದ್ಯದಂಗಡಿ ಮಾಲೀಕರು ಹಲವು ಪ್ರಥಮಗಳ ಮೂಲಕ ತಮ್ಮ ಆಕ್ರೋಶವನ್ನು ವ್ಯಕ್ತಪಡಿಸಲು ಮುಂದಾಗಿದ್ದು, ಸಚಿವರ ಕಾರ್ಯವೈಖರಿ ಎಂಥದ್ದು ಎಂದು ಊಹಿಸಿಕೊಳ್ಳಿ. ಹಿಂದಿನ ಬಿಜೆಪಿ ಸರಕಾರದಲ್ಲಿ 40 ಪ್ರತಿಶತ ಕಮಿಷನ್ ಪಡೆದ ಆರೋಪವಿತ್ತು. ಈಗಿನ ಸರಕಾರದಲ್ಲೂ ಮದ್ಯದಂಗಡಿ ಪರವಾನಗಿ ನೀಡಲು ಕಮಿಷನ್ ಪಡೆಯಲಾಗುತ್ತಿದೆ. ಆದರೆ ಎಷ್ಟು ಪ್ರತಿಶತ ಎನ್ನುವುದು ಗೊತ್ತಾಗಿಲ್ಲ ಅಷ್ಟೆ. ಆದರೆ ಹಿಂದಿನ ಸರಕಾರದ ರೀತಿಯಲ್ಲೆ ಭ್ರಷ್ಟಾಚಾರದಲ್ಲಿ ನಿರತರಾಗಿರುವುದು ಸ್ಪಷ್ಟವಾಗುತ್ತಿದೆ.

ಹೀಗೆ ಕಾಂಗ್ರೆಸ್ ಸರಕಾರದ ಕೆಲ ಮಂತ್ರಿಗಳ ಕಾರ್ಯವೈಖರಿ ಜನಸಾಮಾನ್ಯರ ಇಷ್ಟವಾಗದಿರುವುದು ಒಂದೆಡೆಯಾದರೆ, ಸಚಿವ ಸಂಪುಟದ ಸಹದ್ಯೋಗಿಗಳಿಗೂ ಕೆಲವರ ಕಾರ್ಯವೈಖರಿ ಇಷ್ಟವಾಗುತ್ತಿಲ್ಲ. ಮುಖ್ಯವಾಗಿ ಸಚಿವ ಜಮೀರ್ ಅಹ್ಮದ್ ಖಾನ್ ಬಗ್ಗೆ ಸಚಿವರು ತಮ್ಮ ಪಕ್ಷದ ಹೈಕಮಾಂಡ್‌ಗೆ ದೂರು ನೀಡಿದ್ದಾರೆ.

ಸಚಿವ ಜಮೀರ್ ಅಹ್ಮದ್ ಖಾನ್ ವಕ್ಫ್ ವಿಚಾರವಾಗಿ ಸೃಷ್ಟಿಸಿರುವ ವಿವಾದ ರಾಜ್ಯದಲ್ಲಿ ಅಶಾಂತಿ ಮೂಡಲು ಕಾರಣವಾಗಿದೆ. ಕೋಮು ಸೌಹಾರ್ದಕ್ಕೆ ಧಕ್ಕೆ ತಂದಿದೆ ಎಂದು ಸಚಿವರು ಪತ್ರದಲ್ಲಿ ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಅದು ರಾಜ್ಯದಲ್ಲಿ ಉಪಚುನಾವಣೆ ನಡೆಯುವ ಹೊತ್ತಲ್ಲಿ ಜಮೀರ್ ಹೊತ್ತಿಸಿದ ಬೆಂಕಿ ಕಾಂಗ್ರೆಸ್ ಮೇಲೆ ಪರಿಣಾಮ ಬೀರಲಿದೆ ಎನ್ನುವ ಅಭಿಪ್ರಾಯವನ್ನು ಸಚಿವರು ವ್ಯಕ್ತಪಡಿಸಿದ್ದಾರೆ.

ಒಂದು ಕಡೆ ಮದ್ಯದಂಗಡಿ ಮಾಲೀಕರಿಗೆ ಸಚಿವ ಆರ್.ಬಿ. ತಿಮ್ಮಾಪುರ ಬೇಡವಾಗಿದ್ದಾರೆ. ಮತ್ತೊಂದೆಡೆ ರಾಜ್ಯ ಸಚಿವ ಸಂಪುಟ ಸಚಿವರಿಗೆ ಸಚಿವ ಜಮೀರ್ ಅಹ್ಮದ್ ಬೇಡವಾಗಿದ್ದಾರೆ. ಈ ಇಬ್ಬರು ಸಚಿವರು ಸರಕಾರಕ್ಕೆ ಸದ್ಯ ಕಂಟಕವಾಗಿದ್ದಾರೆ.

ಮೂರು ದಶಕಗಳಿಂದ ಜಕ್ಕಲಿಯ ಮುಸ್ಲಿಂ ಕುಟುಂಬದಿಂದ ಲಕ್ಷ್ಮೀ ಪೂಜೆ

ಭಾವೈಕ್ಯತೆಗೆ ಇಲ್ಲಿದೆ ಸಾಕ್ಷಿ

■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಸಮೀಪದ ಜಕ್ಕಲಿ ಗ್ರಾಮದ ಗಡಾದ ಎಂಬ ಮುಸ್ಲಿಂ ಕುಟುಂಬವೊಂದು ಕಳೆದ 30 ವರ್ಷಗಳಿಂದ ಪ್ರತಿ ದೀಪಾವಳಿಯಲ್ಲಿ ಲಕ್ಷ್ಮಿ ಪೂಜೆಯನ್ನು ನೆರವೇರಿಸುವ ಮೂಲಕ ಭಾವೈಕ್ಯತೆಗೆ ಸಾಕ್ಷಿಯಾಗಿದೆ. ಈ ಕುಟುಂಬದ ಯಜಮಾನ ಕುತ್ಬುದ್ದೀನಗೆ 30 ವರ್ಷಗಳ ಹಿಂದೆ ಅಂಗಡಿ ಇಟ್ಟವರೆಲ್ಲರೂ ದೀಪಾವಳಿ ಹಬ್ಬದಲ್ಲಿ ಲಕ್ಷ್ಮಿ ಪೂಜೆಯನ್ನು ಮಾಡುತ್ತಾರೆ, ನಾನೇಕೆ ಮಾಡಬಾರದು ಎಂಬ ಆಲೋಚನೆ ಹೊಳೆಯಿತು. ವಿಚಾರ ಬಂದಷ್ಟೇ ವೇಗವಾಗಿ ಅದನ್ನು ಕಾರ್ಯರೂಪದಲ್ಲಿಯೂ ತಂದ ಕುತ್ಬುದ್ದೀನ, ಈಗ ಲಕ್ಷ್ಮಿ ಕಟಾಕ್ಷದಿಂದ ನೆಮ್ಮದಿಯ ಬದುಕನ್ನು ಸಾಗಿಸುತ್ತಿದ್ದಾರೆ.

ಆಗ ಕತ್ಬುದ್ದೀನ ಅವರದು ಸೈಕಲ್ ಅಂಗಡಿ ಇತ್ತು. ಈ ಅಂಗಡಿಯಲ್ಲಿ ಎಲ್ಲರೂ ಕೂರಿಸುವ ಹಾಗೆ ಲಕ್ಷ್ಮಿಯನ್ನು ಸರ್ವಾಲಂಕೃತಳಾಗಿ ಕೂರಿಸಿ, ಪುರೋಹಿತರನ್ನು ಕರೆದು ಹಿಂದೂ ಪದ್ಧತಿಯಂತೆ ಶ್ರೀ ಲಕ್ಷ್ಮೀ ಪೂಜೆಯನ್ನು ನೆರವೇರಿಸುತ್ತ ಬಂದರು. ಈ ಪೂಜೆಗೆ ಗ್ರಾಮದ ಸರ್ವ ಧರ್ಮೀಯರನ್ನೂ ಕರೆದು ಅನ್ನಸಂತರ್ಪಣೆಯನ್ನೂ ಸಹ ಮಾಡುತ್ತ ಬಂದಿದ್ದಾರೆ. ಈ ಕಾರ್ಯದಲ್ಲಿ ಅವರ ಮನೆಯವರೆಲ್ಲರ ಸಹಕಾರ ಇದ್ದೇ ಇದೆ. ಗ್ರಾಮದ ಎಲ್ಲ ಜನರೂ ಸಹ ಕುತ್ಬುದ್ದೀನರವರ ಈ ಕಾರ್ಯಕ್ಕೆ ಮೆಚ್ಚುಗೆಯನ್ನು ಸೂಚಿಸಿ ಬೆಂಬಲಿಸುತ್ತಿರುವುದರಿಂದ ಶ್ರೀ ಲಕ್ಷ್ಮೀ ಪೂಜಾ ಕಾರ್ಯವು ಕಳೆದ 30 ವರ್ಷಗಳಿಂದ ನಿರಂತರವಾಗಿ ನಡೆದುಕೊಂಡು ಬಂದಿದೆ.

ಸೈಕಲ್‌ಗಳೇ ಕಾಣೆಯಾಗುತ್ತಿರುವ ಈ ಕಾಲ ಘಟ್ಟದಲ್ಲಿ ಸೈಕಲ್ ಅಂಗಡಿಯನ್ನು ಬಂದ್ ಮಾಡಿ ಈಗ ಪಂಕ್ಚರ್ ತಿದ್ದುವ ಅಂಗಡಿಯನ್ನು ನಡೆಸುತ್ತಿರುವ ಕುತ್ಬುದ್ದೀನ, ಆ ಅಂಗಡಿಯಲ್ಲಿಯೆ ಕಳೆದ ಐದಾರು ವರ್ಷಗಳಿಂದ ಲಕಕ್ಷ್ಮೀ ಪೂಜೆ ನೆರವೇರಿಸುತ್ತಿದ್ದಾರೆ. ಈ ಸಾರೆಯೂ ಅವರು ಪೂಜೆ ನೆರವೇರಿಸಿದ್ದಕ್ಕೆ ಗ್ರಾಮದ ಸಮಸ್ತರೂ ಅವರನ್ನು ಅಭಿನಂದಿಸಿದ್ದಾರೆ.

> ನಾನು ಈ ಪೂಜೆಯನ್ನು ಮಾಡುತ್ತ ಬಂದಿರುವುದರಿಂದ ಮನೆಯಲ್ಲಿ ಸುಖ, ಶಾಂತಿ, ನೆಮ್ಮದಿ ನೆಲೆಸಿದೆ. ನನಗೆ ಮೂವರು ಗಂಡು ಮಕ್ಕಳು ಮತ್ತು ಒಬ್ಬಳು ಹೆಣ್ಣು ಮಗಳು. ಲಕ್ಷ್ಮಿಯ ಆಶೀರ್ವಾದದಿಂದ ಎಲ್ಲರ ಮದುವೆಯನ್ನು ಮಾಡಿರುವೆ. ಒಂದು ಗುಂಟೆ ಜಾಗೆಯನ್ನೂ ಹಿಡಿದು ಮನೆ ಹಾಕಿಸಿರುವೆ. ಐವರು ಮೊಮ್ಮಕ್ಕಳೊಂದಿಗೆ ಸುಖೀ ಜೀವನ ನಡೆಸುತ್ತಿದ್ದೇನೆ. ನನ್ನ ಹೆಂಡತಿ ರಾಜಮಾಬೇಗಂ, ಮಕ್ಕಳಾದ ಕಾಶಿಮಸಾಬ್, ಫಜಲ್‌ಅಹ್ಮದ್, ನಜೀರ್‌ಅಹ್ಮದ್, ಸೊಸೆಯಂದಿರಾದ ನಯೀಂನಜೀಯಾ, ಫರೀನಾಬಾನು, ತಸ್ಮಿಯಾ ಮತ್ತು ಮಗಳಾದ ಸಫರಾಬೇಗಂ, ಅಳಿಯ ಯಮನೂರಸಾಬ್ ಎಲ್ಲರೂ ಸಹಕಾರ ನೀಡುತ್ತಿದ್ದಾರೆ.
>
> – ಕುತ್ಬುದ್ದೀನ.

> ಗಡಾದರವರು ಆಚರಿಸುವ ಪೂಜೆಯನ್ನು ನಾವೂ ನೋಡುತ್ತ ಬಂದಿದ್ದೇವೆ. ಅಂಗಡಿಗೆ ತಳಿರು-ತೋರಣ, ವಿದ್ಯುತ್ ದೀಪಗಳ ಅಲಂಕಾರ, ಹಣತೆ ಹಚ್ಚಿ, ಜ್ಯೋತಿ ಬೆಳಗಿಸಿ ಹಿಂದೂ ಸಂಪ್ರದಾಯದಂತೆ ಲಕ್ಷ್ಮೀದೇವಿಗೆ ಹೋಳಿಗೆ, ಕರಿಗಡಬು ನೈವೇದ್ಯ, ವಿವಿಧ ತರಹದ ಹಣ್ಣು-ಕಾಯಿ, ಹೊಸ ಸೀರೆ ಉಡಿಸಿ ಪೂಜಿಸುವುದನ್ನು ಕಾಣುವುದೇ ಒಂದು ಸೊಗಸು.
>
> – ಸಂಗಮೇಶ ಮೆಣಸಿಗಿ. ಗ್ರಾಮಸ್ಥರು.

ಶಿವಾನುಭವ ಗೋಷ್ಠಿಯಲ್ಲಿ ಎಂ.ಎ. ರಡ್ಡೇರ ಅಭಿಮತ

ಶರಣರ ವಚನಗಳಿಂದ ನೈತಿಕತೆ ವೃದ್ಧಿ

■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ

12ನೇ ಶತಮಾನದಲ್ಲಿನ ಶರಣರು ರಚಿಸಿದ ವಚನಗಳು ನಮ್ಮಲ್ಲಿ ನೈತಿಕತೆಯನ್ನು ಬೆಳೆಸುತ್ತವೆ. ವಚನಗಳನ್ನು ನಾವು ಸರಿಯಾಗಿ ಅರ್ಥ ಮಾಡಿಕೊಂಡರೆ ನಮ್ಮ ಬಾಳು ಬಂಗಾರವಾಗುತ್ತದೆ. ಶ್ರೀಗಳು ಏರ್ಪಡಿಸುವ ಶಿವಾನುಭವಗಳು ನಮಗೆ ವಚನಗಳನ್ನು ಅರ್ಥ ಮಾಡಿಸಲು ಸಹಾಯಕವಾಗುತ್ತವೆ ಎಂದು ಶಿಕ್ಷಣ ಇಲಾಖೆಯ ನಿವೃತ್ತ ಉಪನಿರ್ದೇಶಕ ಎಂ.ಎ. ರಡ್ಡೇರ ಅಭಿಪ್ರಾಯಪಟ್ಟರು.

ನರೇಗಲ್ಲದ ಶ್ರೀ ಅನ್ನದಾನೇಶ್ವರ ಮಂಟಪದಲ್ಲಿ ಶ್ರೀ ಅನ್ನದಾನ ವಿಜಯ ವಿದ್ಯಾ ಪ್ರಸಾರಕ ಸಮಿತಿ ನರೇಗಲ್ಲ ಹಾಗೂ ಅಕ್ಷರ ಭಾರತ ಪ್ರತಿಷ್ಠಾನ ಗದಗ ಇವರುಗಳ ಸಂಯುಕ್ತ ಆಶ್ರಯದಲ್ಲಿ ಜರುಗಿದ 55ನೇ ಶಿವಾನುಭವ ಗೋಷ್ಠಿಯಲ್ಲಿ 'ಜೀವನದಲ್ಲಿ ನೈತಿಕತೆಯ ಪಾತ್ರ' ಕುರಿತು ಅವರು ಮಾತನಾಡಿದರು.

ಮಹಾತ್ಮ ಗಾಂಧೀಜಿಯವರ ಚರಿತ್ರೆಯಲ್ಲಿನ ಅಂತರಂಗ ಮತ್ತು ಬಹಿರಂಗ ಶುದ್ಧತೆಯ ಮಾರ್ಗಗಳನ್ನು ಅರಿತರೆ ಸಾಕು, ನಮ್ಮಲ್ಲಿ ನೈತಿಕತೆಯ ಅರಿವು ಆಗುತ್ತದೆ. ಶಿಕ್ಷಣ ಎಂಬುದು ತಪಃಶಕ್ತಿ ಇದ್ದಂತೆ ಅದನ್ನು ಪಡೆಯಲು ವಿದ್ಯಾರ್ಥಿಯ ಧನಾತ್ಮಕ ಚಿಂತನೆಯಿಂದ ಮಾತ್ರ ಸಾಧ್ಯ. ಸತ್ಯ, ಶಾಂತಿ, ಸಹಿಷ್ಣುತೆ, ಮೌಲ್ಯಯುತ ಶಿಕ್ಷಣ ಪಡೆಯಲು ಶರಣರ ವಚನಗಳು ಸಹಕಾರಿಯಾಗುತ್ತವೆ. ಪ್ರಾಥಮಿಕ ಹಾಗೂ ಪ್ರೌಢಾವಸ್ಥೆಯಲ್ಲಿನ ಮಕ್ಕಳ ಮನಸ್ಸು ಚಂಚಲತೆಯಿಂದ ಕೂಡಿರುತ್ತದೆ. ವಿದ್ಯಾರ್ಥಿಗಳು ಮನಸ್ಸನ್ನು ನಿಗ್ರಹಿಸಲು ತಮ್ಮ ತನು, ಮನಗಳ ಶಾಂತತೆಗಾಗಿ ಯೋಗ, ಧ್ಯಾನಗಳಿಂದ ಮನಸ್ವಾಸ್ಥ್ಯ ಪರಿಶುದ್ಧಗೊಳಿಸಬೇಕಾಗುತ್ತದೆ. ಅಂದಾಗ ಮಾತ್ರ ವಿದ್ಯಾದೇವತೆಯನ್ನು ವರಿಸಲು ಸಾಧ್ಯ. ಅದರಂತೆ ಶಿಕ್ಷಕರೂ ಸಹ ಮಕ್ಕಳ ಮನಸ್ಸಿನ ಚಲನವಲನಗಳನ್ನು ಗಮನಿಸಿ ತಮ್ಮ ವಾಕ್‌ಚಾತುರ್ಯದಿಂದ ತಮ್ಮತ್ತ ಸೆಳೆಯುವಂತೆ ಮಾಡುವದು ಅಷ್ಟೇ ಮುಖ್ಯವಾಗಿದೆ ಎಂದರು.

ಸಾನ್ನಿಧ್ಯ ವಹಿಸಿದ್ದ ಶ್ರೀ ಮುಪ್ಪಿನ ಬಸವಲಿಂಗ ಸ್ವಾಮೀಜಿ ಆಶೀರ್ವಚನ ನೀಡಿ, ಪಾಲಕರು ಮಕ್ಕಳಿಗೆ ಬಾಲ್ಯದಲ್ಲಿಯೇ ಸಂಸ್ಕಾರ ನೀಡಿದರೆ ಶಾಲೆಯಲ್ಲಿ ಶಿಕ್ಷಕರು ಉತ್ತಮ ಶಿಕ್ಷಣ ನೀಡುತ್ತಾರೆ. ಇದರಿಂದ ವಿದ್ಯಾರ್ಥಿಗಳಲ್ಲಿ ಶಿಕ್ಷಣದ ಜೊತೆಗೆ ಸಾಮಾನ್ಯ ಜ್ಞಾನ ಸಂಪಾದನೆಯಾಗುತ್ತದೆ. ಈ ಪರಿಕಲ್ಪನೆ ಪ್ರತಿಯೊಬ್ಬ ನಾಗರಿಕರಲ್ಲಿ ಮೂಡಿದಾಗ ಮಾತ್ರ ಮಕ್ಕಳ ಸರ್ವಾಂಗೀಣ ಅಭಿವೃದ್ಧಿ ಸಾಧ್ಯವಾಗುತ್ತದೆ ಎಂದರು.

ಕಾರ್ಯಕ್ರಮದಲ್ಲಿ ನರೇಗಲ್ಲ ಪ.ಪಂ ಅಧ್ಯಕ್ಷ ಫಕೀರಪ್ಪ ಮಳ್ಳಿ, ಉಪಾಧ್ಯಕ್ಷ ಕುಮಾರಸ್ವಾಮಿ ಕೋರಧಾನ್ಯಮಠರನ್ನು ಶ್ರೀಗಳು ಸನ್ಮಾನಿಸಿದರು. ಸಂಸ್ಥೆಯ ಆಡಳಿತಾಧಿಕಾರಿ ಎನ್.ಆರ್. ಗೌಡರ, ಡಾ. ಕೆ.ಬಿ. ಧನ್ನೂರ, ಡಾ. ಆರ್.ಕೆ. ಗಚ್ಚಿನಮಠ, ಎಮ್.ಎ. ಹಿರೆವಡೆಯರ, ಡಾ. ಎಲ್.ಎಸ್. ಗೌರಿ ಉಪಸ್ಥಿತರಿದ್ದರು. ಮುಖ್ಯ ಶಿಕ್ಷಕ ಎಸ್.ಎನ್. ಹೂಲಗೇರಿ ಸ್ವಾಗತಿಸಿದರು. ಆರ್.ಕೆ. ಬಾಗವಾನ್ ನಿರೂಪಿಸಿದರು. ಎಸ್.ಬಿ. ಬೂದಿಹಾಳ ವಂದಿಸಿದರು.–

ಗ್ರಾ.ಪಂ.ಗಳ ಸದಸ್ಯ ಸ್ಥಾನಗಳಿಗೆ ಉಪ ಚುನಾವಣೆ

ವೇಳಾಪಟ್ಟಿ ಪ್ರಕಟ

■ ವಿಜಯಸಾಕ್ಷಿ ಸುದ್ದಿ, ಗದಗ

ರಾಜ್ಯ ಚುನಾವಣಾ ಆಯೋಗದ ಆದೇಶದನ್ವಯ ಗದಗ ಜಿಲ್ಲೆಯ ಲಕ್ಕುಂಡಿ-2, ಕೊಂಚಿಗೇರಿ, ರಣತೂರ, ವಡವಿ, ಇಟಗಿ, ಡಂಬಳ, ಕದಾಂಪೂರ, ಕೊತಬಾಳ ಗ್ರಾಮ ಪಂಚಾಯಿತಿಗಳಲ್ಲಿ ವಿವಿಧ ಕಾರಣಗಳಿಂದ ತೆರವಾಗಿರುವ/ಖಾಲಿ ಉಳಿದಿರುವ ಸದಸ್ಯ ಸ್ಥಾನಗಳಿಗೆ ಉಪ ಚುನಾವಣೆ ಜರುಗಿಸಲು ಚುನಾವಣಾ ವೇಳಾಪಟ್ಟಿ ಪ್ರಕಟಿಸಲಾಗಿದೆ.

ಚುನಾವಣಾ ಅಧಿಸೂಚನೆ ಹೊರಡಿಸುವ ದಿನಾಂಕ ನವೆಂಬರ್ 6ಆಗಿದ್ದು, ನವೆಂಬರ್ 12ರೊಳಗೆ ನಾಮಪತ್ರಗಳನ್ನು ಸಲ್ಲಿಸಬಹುದಾಗಿದೆ. ನಾಮಪತ್ರಗಳನ್ನು ನವೆಂಬರ್ 13ರಂದು ಪರಿಶೀಲಿಸಲಾಗುವುದು. ನವೆಂಬರ್ 15 ಉಮೇದುವಾರಿಕೆಗಳನ್ನು ಹಿಂತೆಗೆದುಕೊಳ್ಳುವ ಕೊನೆಯ ದಿನವಾಗಿದ್ದು, ಮತದಾನವನ್ನು ನವೆಂಬರ್ 23ರಂದು ಬೆಳಿಗ್ಗೆ 7 ಗಂಟೆಯಿಂದ ಸಂಜೆ 5 ಗಂಟೆಯವರೆಗೆ ನಡೆಸಲಾಗುವುದು. ಮತಗಳ ಎಣಿಕೆಯು ನವೆಂಬರ್ 26ರಂದು ಬೆಳಿಗ್ಗೆ 8 ಗಂಟೆಯಿಂದ ನಡೆಯಲಿದ್ದು, ಅದೇ ದಿನ ಚುನಾವಣೆ ಪ್ರಕ್ರಿಯೆ ಮುಕ್ತಾಯಗೊಳ್ಳಲಿದೆ.

ಚುನಾವಣೆ ನಡೆಯುವ ಗ್ರಾ.ಪಂಗಳ ವ್ಯಾಪ್ತಿಯಲ್ಲಿ ಚುನಾವಣಾ ನೀತಿ ಸಂಹಿತೆಯು ನವೆಂಬರ್ 6ರಿಂದ ಜಾರಿಯಾಗಲಿದ್ದು, ನವೆಂಬರ್ 26ರವರೆಗೆ ಜಾರಿಯಲ್ಲಿರುತ್ತದೆ ಎಂದು ಜಿಲ್ಲಾ ಚುನಾವಣಾಧಿಕಾರಿಗಳೂ ಆಗಿರುವ ಜಿಲ್ಲಾಧಿಕಾರಿ ಗೋವಿಂದರೆಡ್ಡಿ ತಿಳಿಸಿದ್ದಾರೆ.

ಸಾರ್ವಜನಿಕರ ಗಮನಕ್ಕೆ

■ ವಿಜಯಸಾಕ್ಷಿ ಸುದ್ದಿ, ಗದಗ

ಅನಾಥ, ಪರಿತ್ಯಕ್ತ ಮತ್ತು ಒಪ್ಪಿಸಲ್ಪಟ್ಟ ಮಕ್ಕಳ ಮಾಹಿತಿಯು ಕಂಡು ಬಂದಲ್ಲಿ ಜಿಲ್ಲಾ ಮಕ್ಕಳ ರಕ್ಷಣಾ ಘಟಕ, ಜಿಲ್ಲಾಡಳಿತ ಭವನ, ಎರಡನೇ ಮಹಡಿ, ರೂ. ನಂ-225, ದೂರವಾಣಿ ಸಂಖ್ಯೆ : 08372-250758ನ್ನು ಸಂಪರ್ಕಿಸಬಹುದಾಗಿದೆ ಎಂದು ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳು, ಜಿಲ್ಲಾ ಮಕ್ಕಳ ರಕ್ಷಣಾ ಘಟಕ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಕಂದಾಯ ಅಧಿಕಾರಿಗಳಿಗೆ ಬೆದರಿಕೆ ಹಾಕಿದ ಮಾಜಿ ಸಚಿವ ಕಳಕಪ್ಪ ಬಂಡಿ ಅವರ ಮೇಲೆ ಕ್ರಮಕ್ಕೆ ಆಗ್ರಹ

ಸರ್ಕಾರಿ ನೌಕರರಿಗೆ ರಕ್ಷಣೆ ಒದಗಿಸಿ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಮಾಜಿ ಸಚಿವ ಕಳಕಪ್ಪ ಬಂಡಿಯವರು ಸೋಮವಾರ ಗಜೇಂದ್ರಗಡದಲ್ಲಿ ನಡೆದ ಪ್ರತಿಭಟನೆಯ ಸಂದರ್ಭದಲ್ಲಿ ತಹಸೀಲ್ದಾರರಿಗೆ ವೈಯಕ್ತಿಕ ನಿಂದನೆ ಹಾಗೂ ಅಸಾಂವಿಧಾನಿಕ ಭಾಷೆ ಉಪಯೋಗ ಮಾಡಿ ಕಂದಾಯ ಇಲಾಖೆಯ ಅಧಿಕಾರಿಗಳಿಗೆ ಬೆದರಿಕೆ ತೆ-ಗೂರಿದ್ದು, ಅವರ ಮೇಲೆ ಕ್ರಮ ಕೈಗೊಳ್ಳಬೇಕೆಂದು ಆಗ್ರಹಿಸಿ ಲಕ್ಷ್ಮೇಶ್ವರ ತಾಲೂಕಾ ರಾಜ್ಯ ಸರಕಾರಿ ನೌಕರರ ಸಂಘದವರು ತಹಸೀಲ್ದಾರರ ಮೂಲಕ ಜಿಲ್ಲಾಧಿಕಾರಿಗಳಿಗೆ ಮಂಗಳವಾರ ಮನವಿ ಅರ್ಪಿಸಿದರು.

ಗಜೇಂದ್ರಗಡದಲ್ಲಿ ರಾಜ್ಯದ ರೈತರ, ದೇವಾಲಯ ಹಾಗೂ ಮಠ-ಮಾನ್ಯಗಳ ಅಸ್ತಿಗಳ ಮೇಲೆ ವಕ್ಫ್ ಬೋರ್ಡ್ ಹೆಸರು ದಾಖಲಿಸುತ್ತಿರುವ ರಾಜ್ಯ ಸರ್ಕಾರದ ನಡೆ ಖಂಡಿಸಿ ರಾಜ್ಯ ಬಿಜೆಪಿ ಕರೆ ನೀಡಿದ್ದ ಪ್ರತಿಭಟನೆ ಅಂಗವಾಗಿ ಸೋಮವಾರ ಮಾಜಿ ಸಚಿವ ಕಳಕಪ್ಪ ಬಂಡಿ ನೇತೃತ್ವದಲ್ಲಿ ಬಿಜೆಪಿ ಕಾರ್ಯಕರ್ತರು ಪ್ರತಿಭಟಿಸಿ ತಹಸೀಲ್ದಾರರಿಗೆ ಮನವಿ ಸಲ್ಲಿಸಲು ಕಚೇರಿ ಮುಂದೆ ಬಂದು ಕರ್ತವ್ಯ ನಿರತ ಗಜೇಂದ್ರಗಡ ತಹಸೀಲ್ದಾರ ಕಿರಣಕುಮಾರ ಕುಲಕರ್ಣಿ ಇವರಿಗೆ ಸಾರ್ವಜನಿಕರೆದುರೇ ಏಕವಚನದಿಂದ ನಿಂದಿಸಿ, ಕಂದಾಯ ಇಲಾಖೆಯ ಅಧಿಕಾರಿ ಹಾಗೂ ನೌಕರರಿಗೆ ಸರ್ಕಾರಿ ಕರ್ತವ್ಯ ನಿರ್ವಹಿಸಲು ತೊಂದರೆಯುಂಟು ಮಾಡಿದ್ದಾರೆ. ಪ್ರತಿದಿನ ಸಾರ್ವಜನಿಕ ಸೇವೆಯಲ್ಲಿ ನಿರತರಾಗಿರುವ ಇಲಾಖೆಯ ಅಧಿಕಾರಿಗಳು ಮತ್ತು ನೌಕರರಿಗೆ ಸೂಕ್ತ ರಕ್ಷಣೆಯನ್ನು ಒದಗಿಸಲು ಮತ್ತು ತಪ್ಪಿತಸ್ಥರ ವಿರುದ್ಧ ಕ್ರಮಕೈಗೊಳ್ಳಲು ವಿನಂತಿಸಿದರು.

ತಹಸೀಲ್ದಾರ ವಾಸುದೇವ ಸ್ವಾಮಿ ಮನವಿ ಸ್ವೀಕರಿಸಿದರು. ಈ ಸಂದರ್ಭದಲ್ಲಿ ಗ್ರೇಡ್-2 ತಹಸೀಲ್ದಾರ ಮಂಜುನಾಥ ಅಮಾಸಿ, ಉಪತಹಸೀಲ್ದಾರ ಪ್ರಶಾಂತ ಕಿಮಾಯಿ, ಇಓ ಕೃಷ್ಣಪ್ಪ ಧರ್ಮರ, ಜಿ.ಡಿ. ಹವಳದ, ನೌಕರರ ಸಂಘದ ನಿಕಟಪೂರ್ವ ಅಧ್ಯಕ್ಷ ಡಿ.ಎಚ್. ಪಾಟೀಲ, ಅಧ್ಯಕ್ಷ ಎಂ.ಎ. ನದಾಫ್, ಬಸವರಾಜ ಯತ್ನಳ್ಳಿ, ಮಂಜುನಾಥ ವಾರದ ಮುಂತಾದವರಿದ್ದರು.

ಕಲಾವಿದರಿಗೆ 2 ದಿನದ ಕಾರ್ಯಾಗಾರ

■ ವಿಜಯಸಾಕ್ಷಿ ಸುದ್ದಿ, ಗದಗ

ಭಾರತ ಸರಕಾರ ವಾರ್ತಾ ಮತ್ತು ಪ್ರಸಾರ ಮಂತ್ರಾಲಯ ಬೆಂಗಳೂರು ಇವರ ಆಶ್ರಯದಲ್ಲಿ ಹುಲಕೋಟಿಯ ಕೃಷಿ ವಿಜ್ಞಾನ ತರಬೇತಿ ಕೇಂದ್ರದಲ್ಲಿ ಕೇಂದ್ರ ಸಂವಹನ ಇಲಾಖೆ ಬೆಂಗಳೂರು ಇವರಿಂದ ಉತ್ತರ ಕರ್ನಾಟಕದ ನೋಂದಾಯಿತ 50 ಕಲಾ ತಂಡದ 250 ಕಲಾವಿದರಿಗೆ 2 ದಿನದ ಕಾರ್ಯಾಗಾರ ನೆರವೇರಿತು.

ಕಾರ್ಯಕ್ರಮದಲ್ಲಿ ಕೃಷಿ ಇಲಾಖೆಯ ಗದಗ ಜಿಲ್ಲಾ ಉಪನಿರ್ದೇಶಕರಾದ ಸ್ಫೂರ್ತಿ ಜಿ.ಎಸ್, ಕೇಂದ್ರ ಸಂವಹನ ಇಲಾಖೆಯ ನಿರ್ದೇಶಕರಾದ ಪಲ್ಲವಿ ಚಿನ್ಯಾ, ಉಪನಿರ್ದೇಶಕರಾದ ಜೈಕುಮಾರ, ಆರೋಗ್ಯ ಇಲಾಖೆಯ ಐಇಸಿ ವಿಭಾಗದ ಚವ್ಹಾಣ,

ನರಗುಂದ ತಾಲೂಕಿನ ಕೊಣ್ಣೂರು, ಶಿರೋಳ ಗ್ರಾ.ಪಂಗೆ ಜಿ.ಪಂ ಸಿಇಓ ಭರತ್ ಎಸ್ ಭೇಟಿ

ನರೇಗಾ ಕಾಮಗಾರಿ ಪರಿಶೀಲನೆ

■ ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭರತ್ ಎಸ್ ಅವರು ಮಂಗಳವಾರ ನರಗುಂದ ತಾಲೂಕಿನ ಗ್ರಾಮ ಪಂಚಾಯಿತಿಗಳಿಗೆ ಭೇಟಿ ನೀಡಿ ನರೇಗಾ ಕಾಮಗಾರಿಗಳ ಗುಣಮಟ್ಟವನ್ನು ಪರಿಶೀಲಿಸಿದರು.

ಹುಣಶೀಕಟ್ಟಿ, ಕೊಣ್ಣೂರು ಮತ್ತು ಶಿರೋಳ ಗ್ರಾ.ಪಂಗಳಿಗೆ ಭೇಟಿ ನೀಡಿದ ಭರತ್ ಎಸ್, ನರೇಗಾ ಯೋಜನೆಯಡಿ ಪ್ರಗತಿಯಲ್ಲಿರುವ ಹಾಗೂ ಮುಕ್ತಾಯಗೊಂಡ ಕಾಮಗಾರಿಗಳನ್ನು ಪರಿಶೀಲಿಸಿದರು. ಹುಣಶೀಕಟ್ಟಿ ಗ್ರಾ.ಪಂ ವ್ಯಾಪ್ತಿಯ ಕಲಕೇರಿ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ನರೇಗಾ ಮತ್ತು ಪಿಆರ್.ಇಡಿ ಇಲಾಖೆ ಒಗ್ಗೂಡುವಿಕೆಯಡಿ 1.33 ಲಕ್ಷ ರೂ ವೆಚ್ಚದಡಿ ನಿರ್ಮಿಸುತ್ತಿರುವ ಶಾಲಾ ಶೌಚಾಲಯದ ಕಾಮಗಾರಿ, ಕೊಣ್ಣೂರು ಗ್ರಾ.ಪಂನಲ್ಲಿ ನರೇಗಾ ಯೋಜನೆಯಡಿ ನಿರ್ಮಿಸಿದ ಗಟಾರ ಮತ್ತು ಸಿ.ಸಿ. ರಸ್ತೆ ಕಾಮಗಾರಿಗೆ ಭೇಟಿ ನೀಡಿ ಪರಿಶೀಲಿಸಿ, ಪ್ರಗತಿ ಹಂತದಲ್ಲಿರುವ ಕಾಮಗಾರಿಗಳನ್ನು ಆದಷ್ಟು ಬೇಗ ಮುಕ್ತಾಯಗೊಳಿಸಲು ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಿದರು.

ಶಿರೋಳ ಗ್ರಾಮದ ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ಭೇಟಿ ನೀಡಿದ ಸಿಇಓ ಅವರು, ಆಸ್ಪತ್ರೆಗೆ ಚಿಕಿತ್ಸೆಗೆ ಬಂದಿದ್ದ ರೋಗಿಗಳ ಜೊತೆ ಸಮಾಲೋಚನೆ ನಡೆಸಿ ಪ್ರಾಥಮಿಕ ಆರೋಗ್ಯ ಕೇಂದ್ರದಿಂದ ಅಗತ್ಯ ಚಿಕಿತ್ಸಾ ಸೌಲಭ್ಯಗಳನ್ನು ತಲುಪಿತ್ತಿರುವ ಕುರಿತು ಮಾಹಿತಿ ಪಡೆದರು. ಈ ಸಂದರ್ಭದಲ್ಲಿ ಹಾಜರಿದ್ದ ಆರೋಗ್ಯ ಕೇಂದ್ರದ ವೈದ್ಯಾಧಿಕಾರಿ ಡಾ. ಪಂಕಜಾ ಮೈತ್ರಿ ಅವರ ಜೊತೆಗೆ ಸಮಾಲೋಚನೆ ನಡೆಸಿ ಶಿರೋಳ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಪ್ರತಿ ತಿಂಗಳು ಡೆಲಿವರಿ ಪ್ರಕರಣಗಳ ಸಂಖ್ಯೆಯ ಬಗ್ಗೆ ಮಾಹಿತಿ ಪಡೆದರು. ಅಲ್ಲದೆ ಔಷಧಿ ಉಗ್ರಾಣಕ್ಕೆ ಭೇಟಿ

ನೀಡಿ ಔಷಧಿಗಳ ದಾಸ್ತಾನು ಕುರಿತು ಮಾಹಿತಿ ಪಡೆದರು. ಲ್ಯಾಬ್, ಶಸ್ತ್ರ ಚಿಕಿತ್ಸೆ ಕೊಠಡಿ ಸೇರಿದಂತೆ ಆರೋಗ್ಯ ಕೇಂದ್ರದ ಪ್ರತಿ ವಿಭಾಗಕ್ಕೂ ತೆರಳಿ ಆರೋಗ್ಯ ಕೇಂದ್ರದ ಸ್ವಚ್ಛತೆ ಮತ್ತು ನಿರ್ವಹಣೆ ಕುರಿತು ತಪಾಸಣೆ ನಡೆಸಿದರು.

ಶಿರೋಳ ಗ್ರಾಮದ ಸರ್ಕಾರಿ ಮಾದರಿ ಕೇಂದ್ರ ಶಾಲೆಯ ಮಕ್ಕಳ ಜೊತೆ ಬಿಸಿಯೂಟ ಸವಿದರು. ತರುವಾಯ, ಶಾಲಾ ಮಕ್ಕಳ ಜೊತೆ ಸಮಾಲೋಚನೆ ನಡೆಸಿ ಪ್ರತಿನಿತ್ಯ ಮಕ್ಕಳಿಗೆ ಕೊಡುವ ಆಹಾರದ ಕುರಿತು ಮಾಹಿತಿ ಪಡೆದರು. ಅಲ್ಲದೆ ಊಟದ ಜೊತೆ ಶಿಕ್ಷಕರು ಹೇಳುವ ಪಾಠದ ಬಗ್ಗೆ ಆಸಕ್ತಿವಹಿಸಿ ಕಲಿಕೆಯಲ್ಲಿ ತಮ್ಮನ್ನು ತೊಡಗಿಸಿಕೊಳ್ಳುವಂತೆ ಕಿವಿಮಾತು ಹೇಳಿದರು. ಊಟದ ಬಳಿಕ ಬಿಸಿಯೂಟ ಸಿಬ್ಬಂದಿ ಜೊತೆ ಮಾತನಾಡಿ, ಆಹಾರ ಗುಣಮಟ್ಟ ಕಾಪಾಡಿಕೊಂಡು ಹೋಗುವಂತೆ ಸೂಚಿಸಿದರು. ಈ ಸಂದರ್ಭದಲ್ಲಿ ಕ್ಷೇತ್ರ ಶಿಕ್ಷಣಧಿಕಾರಿಗಳಾದ ಡಾ. ಗುರುನಾಥ ಹೂಗಾರ, ಕಾರ್ಯನಿರ್ವಾಹಕ ಅಧಿಕಾರಿಗಳಾದ ಎಸ್.ಕೆ. ಇನಾಮದಾರ್, ಸಹಾಯಕ ನಿರ್ದೇಶಕರು (ಗ್ರಾಮೀಣ ಉದ್ಯೋಗ) ಸಂತೋಷಕುಮಾರ್ ಪಾಟೀಲ್, ಶಿರೋಳ ಪಿಡಿಓ ವೈ.ಬಿ. ಸಂಕನಗೌಡರ, ಪಿಆರ್. ಇಡಿ ಎಇಇ ನಿಂಗಪ್ಪ ಬೇವಿನಗಿಡದ ಅವರು

> ಶಿರೋಳ ಗ್ರಾಮದಲ್ಲಿ ಜಿಲ್ಲಾ ಪಂಚಾಯತ ಹಾಗೂ ಜಿಲ್ಲಾ ಆಡಳಿತ ಗದಗ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಡಿ.ದೇವರಾಜ ಅರಸು ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿ ನಿಲಯಕ್ಕೆ ಭೇಟಿ ನೀಡಿದ ಭರತ್ ಎಸ್ ವಿದ್ಯಾರ್ಥಿಗಳ ವಸತಿ ಕೊಠಡಿ ಮತ್ತು ಅಡುಗೆ ಕೊಠಡಿಗೆ ಭೇಟಿ ನೀಡಿ ದವಸ-ದಾನ್ಯಗಳ ಗುಣಮಟ್ಟ ಪರಿಶೀಲಿಸಿದರು.

ಸಾಥ್ ನೀಡಿದರು.

ಸಿಇಓ ಅವರ ನರಗುಂದ ತಾಲೂಕು ಭೇಟಿ ಸಂದರ್ಭದಲ್ಲಿ ಕೊಣ್ಣೂರು ಪಿಡಿಓ ಮಂಜುನಾಥ ಗಣಿ, ಹುಣಶಿಕಟ್ಟಿ ಪಿಡಿಓ ವ್ಹಿ.ಆರ್. ರಾಯನಗೌಡರ, ತಾಲೂಕು ನರೇಗಾ ಸಂಯೋಜಕ ಹನಮಂತ ಡಂಬಳ, ಐಇಸಿ ಸಂಯೋಜಕ ಸುರೇಶ ಬಾಳಿಕಾಯಿ, ತಾಂತ್ರಿಕ ಸಹಾಯಕರಾ ಅಲ್ತಾಪ್ ಅಮ್ಮಿನಬಾವಿ, ಮಲ್ಲಪ್ಪ ಕಟ್ಟಮನಿ, ಹುಚ್ಚಪ್ಪ ಕಟ್ಟಿ ಮತ್ತು ಹುಣಶೀಕಟ್ಟಿ, ಕೊಣ್ಣೂರು, ಶಿರೋಳ ಗ್ರಾ.ಪಂಗಳ ಸಿಬ್ಬಂದಿ ವರ್ಗದವರು ಹಾಜರಿದ್ದರು.

ಗ್ರಾಮ ಒನ್ ಕೇಂದ್ರಗಳಿಗೆ ಅರ್ಜಿ ಆಹ್ವಾನ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲೆಯಲ್ಲಿ ಖಾಲಿ ಇರುವ ಶಿರಹಟ್ಟಿ ತಾಲೂಕಿನ ವಡವಿ ಹಾಗೂ ಮಜ್ಜೂರ, ಮುಂಡರಗಿ ತಾಲೂಕಿನ ಮೇವುಂಡಿ, ಗದಗ ತಾಲೂಕಿನ ಬಿಂಕದಕಟ್ಟಿ ಗ್ರಾಮ ಪಂಚಾಯತಿಗಳ ಗ್ರಾಮ ಒನ್ ಕೇಂದ್ರಗಳಿಗೆ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸಲಾಗಿದ್ದು, ಆಸಕ್ತ ಅಭ್ಯರ್ಥಿಗಳು ನವೆಂಬರ್ 15 ರೊಳಗಾಗಿ ಅರ್ಜಿಗಳನ್ನು https://www.karnatakaone.gov.in/Public/GramOneFranchiseeTerms ನಲ್ಲಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಬಹುದಾಗಿದೆ ಎಂದು ಜಿಲ್ಲಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಬಸವೇಶ್ವರ ಪ್ರಾಥಮಿಕ ಶಾಲೆಯಲ್ಲಿ ರಾಜ್ಯೋತ್ಸವ

■ ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ

ತಾಲೂಕಿನ ರಾಜೂರಿನ ಶ್ರೀ ಬಸವೇಶ್ವರ ಪ್ರಾಥಮಿಕ ಶಾಲೆಯಲ್ಲಿ ಕನ್ನಡ ರಾಜ್ಯೋತ್ಸವ ಆಚರಿಸಲಾಯಿತು. ಚಂದ್ರಗೌಡ ಪಾಟೀಲ ಭುವನೇಶ್ವರಿ ಮಾತೆಯ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ನಮ್ಮ ಕನ್ನಡ ನಾಡು ಶ್ರೀಗಂಧದ ಬೀಡು. ಶಾಂತಿ, ನೆಮ್ಮದಿಯ ತವರೂರು. ಇಂತಹ ನಾಡಿನಲ್ಲಿ ಜನಿಸಿದ ನಾವೆಲ್ಲರೂ ಪುಣ್ಯವಂತರು ಎಂದರು. ಶಾಲೆಯ ಮುಖ್ಯೋಪಾಧ್ಯಾಯರಾದ ಕಳಕಪ್ಪ ಬೆನಕನವಾರಿ ಮಾತನಾಡಿ, ಕನ್ನಡ ಭಾಷೆಯು ನಮ್ಮ ಹೃದಯದ ಭಾಷೆಯಾಗಿದೆ. ಕನ್ನಡವೇ ನಮ್ಮ ಉಸಿರಾಗಬೇಕು, ಬೇರೆ ಭಾಷೆಯನ್ನು ಪ್ರೀತಿಸುವುದರೊಂದಿಗೆ ನಮ್ಮ ಭಾಷೆಯಲ್ಲಿ ಜೀವಿಸಬೇಕು ಎಂದರು.

ತೃಪ್ತಿ ಗೂಳಿ, ಉದಯ ರಾಠೋಡ, ಚೈತ್ರಾ ರಾಠೋಡ ಹಾಗೂ ವಿದ್ಯಾಶ್ರೀ ಬೆನಕನವಾರಿ ಕನ್ನಡ ನಾಡು-ನುಡಿಯ ಕುರಿತು ತಮ್ಮ ಅನಿಸಿಕೆ ವ್ಯಕ್ತಪಡಿಸಿದರು. ದಿವ್ಯಾಶ್ರೀ ಕಾಳಿ ಸ್ವಾಗತಿಸಿ ನಿರೂಪಿಸಿದರು. ನಿಂಗರಾಜ ಕಪ್ಪರದ ವಂದಿಸಿದರು. ಕಾರ್ಯಕ್ರಮದಲ್ಲಿ ಚಂದ್ರಗೌಡ ಪಾಟೀಲ, ಶಿಕ್ಷಕಿಯರಾದ ಜಿ.ಜಿ. ವ್ಯಾಪಾರಿ, ಎಸ್.ಕೆ. ಬೆನಕನವಾರಿ, ಸಮಸ್ತ ಸಿಬ್ಬಂದಿ ವರ್ಗದವರು ಹಾಗೂ ವಿದ್ಯಾರ್ಥಿಗಳು ಇದ್ದರು.

ರಾಣಿ ಚನ್ನಮ್ಮ ಭವನ ನಿರ್ಮಾಣಕ್ಕೆ ದೇಣಿಗೆ

■ ವಿಜಯಸಾಕ್ಷಿ ಸುದ್ದಿ, ಗದಗ

ಪಂಚಮಸಾಲಿ ಸಮಾಜ ಸೇವಾ ಟ್ರಸ್ಟ್ ಗದಗ ನಗರದ ಕಳಸಾಪುರ ರಸ್ತೆಯಲ್ಲಿ ನಿರ್ಮಾಣ ಮಾಡಲು ಉದ್ದೇಶಿಸಿರುವ ಶ್ರೀ ರಾಣಿ ಚನ್ನಮ್ಮ ಭವನದ ಕಟ್ಟಡ ನಿರ್ಮಾಣ ಕಾರ್ಯಕ್ಕೆ ಗದಗ ನಗರದ ಉದ್ಯಮಿಗಳು ಹಾಗೂ ಸಮಾಜದ ಯುವ ಮುಖಂಡರಾದ ವೀರಣ್ಣ ಮೇಟಿಯವರು ಸಮಾಜ ಸಂಘಟನೆಗಾಗಿ ತಮ್ಮ ಸ್ವ ಇಚ್ಛೆಯಿಂದ ಐದು ಲಕ್ಷ ರೂಪಾಯಿಗಳ ದೇಣಿಗೆಯನ್ನು ನೀಡುವ ಮೂಲಕ ಟ್ರಸ್ಟಿನ ನೂತನ ಸದಸ್ಯರಾಗಿ ಸೇರ್ಪಡೆಯಾದರು.

ಈ ಹಿನ್ನೆಲೆಯಲ್ಲಿ ಟ್ರಸ್ಟ್‌ನ ಎಲ್ಲಾ ಸದಸ್ಯರು ಅವರ ನಿವಾಸಕ್ಕೆ ತೆರಳಿ ಗೌರವಿಸಿದರು. ಈ ಸಂದರ್ಭದಲ್ಲಿ ಮಾತನಾಡಿದ ವೀರಣ್ಣ ಮೇಟಿ, ಪಂಚಮಸಾಲಿ

ಸಮಾಜದಲ್ಲಿ ಹುಟ್ಟಿದ ನಾವು ಸಮಾಜಕ್ಕಾಗಿ ಏನಾದರೂ ಮಾಡಬೇಕು ಎನ್ನುವ ಮಹಾದಾಸೆಯನ್ನು ಹೊಂದಿ ಈ ದೇಣಿಗೆಯನ್ನು ನೀಡುತ್ತಿದ್ದು, ಶೀಘ್ರದಲ್ಲಿಯೇ ಭೂಮಿ ಪೂಜೆ ನೆರವೇರಿಸಿ ಕಾಮಗಾರಿ ಪ್ರಾರಂಭವಾಗಲಿ ಹಾಗೂ ಶ್ರೀ ರಾಣಿ ಚನ್ನಮ್ಮ ಭವನ ನಿರ್ಮಾಣ ಮಾಡುವ ಕಾಮಗಾರಿಗೆ ಹೆಚ್ಚಿನ ದೇಣಿಗೆಯನ್ನು ಕೊಡಿಸುವಲ್ಲಿ ಶ್ರಮಿಸುತ್ತೇನೆ ಎಂದು ಭರವಸೆ ನೀಡಿದರು.

ಈ ಸಂದರ್ಭದಲ್ಲಿ ಟ್ರಸ್ಟಿನ ಅಧ್ಯಕ್ಷರಾದ ಮೋಹನ ಮಾಳಶೆಟ್ಟಿ, ಹಿರಿಯರಾದ ಶಾಂತಣ್ಣ ಮುಳವಾಡ, ಟ್ರಸ್ಟಿನ ಸದಸ್ಯರಾದ ಅನಿಲ ಪಾಟೀಲ, ಅಶೋಕ ಸಂಕಣ್ಣವರ, ಸಿದ್ಧಲಿಂಗೇಶ್ವರ ಕರಬಿಸ್ಟಿ, ಮಾಲತೇಶ ಹಿರೇಮನಿಪಾಟೀಲ, ಸಿದ್ದನಗೌಡ ಪಾಟೀಲ, ವಿಶ್ವನಾಥ್ ಹಳ್ಳಿಕೇರಿ, ಶಿವರಾಜಗೌಡ ಹಿರೇಮನಿಪಾಟೀಲ, ಶರಣು ಬೋಳನವರ, ಸಂಗಮೇಶ್ ಕವಳಿಕಾಯಿ ಮುಂತಾದವರಿದ್ದರು.

ಅಹೋರಾತ್ರಿ ಉಪವಾಸ ಸತ್ಯಾಗ್ರಹಕ್ಕೆ ನಿರ್ಧಾರ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಪಿಎಸ್‌ಐ ಈರಣ್ಣ ರಿತ್ತಿ ಅಮಾನತ್ತಿಗೆ ಆಗ್ರಹಿಸಿ ಗೋಸಾವಿ ಸಮಾಜ ಮತ್ತು ಶ್ರೀರಾಮ ಸೇನೆ ಕಾರ್ಯಕರ್ತರು ಇಲ್ಲಿನ ತಹಸೀಲ್ದಾರ ಕಚೇರಿ ಎದುರು ನಡೆಸುತ್ತಿರುವ ಅನಿರ್ದಿಷ್ಟಾವಧಿ ಧರಣಿ ಸತ್ಯಾಗ್ರಹ ಮಂಗಳವಾರ 6ನೇ ದಿನಕ್ಕೆ ಕಾಲಿಟ್ಟಿದ್ದು, ನವೆಂಬರ್ 6ರಿಂದ ಅಹೋರಾತ್ರಿ ಉಪವಾಸ ಸತ್ಯಾಗ್ರಹ ನಡೆಸಲು ಹೋರಾಟಗಾರರು ನಿರ್ಧರಿಸಿದ್ದಾರೆ. ಗೋಸಾವಿ ಸಮಾಜದ ಮುಖಂಡ ಬಾಳಪ್ಪ ಗೋಸಾವಿ ಮಾತನಾಡಿ, ಪಿಎಸ್‌ಐ ಈರಪ್ಪ ರಿತ್ತಿ ಅವರನ್ನು ಅಮಾನತ್ತು ಮಾಡಬೇಕು ಎಂದು ಹೋರಾಟ ಮಾಡುತ್ತಿದ್ದೇವೆ. ಆದರೆ ಅಧಿಕಾರಿಗಳು ಈವರೆಗೆ ಯಾವುದೇ ಕ್ರಮ ಕೈಗೊಂಡಿಲ್ಲ. ಕಾರಣ, ಪ್ರತಿಭಟನೆಯ ಉಗ್ರ ಸ್ವರೂಪವಾಗಿ ಬುಧವಾರದಿಂದ ಅಹೋರಾತ್ರಿ ಉಪವಾಸ ಸತ್ಯಾಗ್ರಹ

ನಡೆಸಲು ನಿರ್ಧರಿಸಿದ್ದೇವೆ ಎಂದು ಹೇಳಿದರು.

ತಹಸೀಲ್ದಾರರ ಕಚೇರಿ ಎದುರೇ ಧರಣಿ ನಡೆಸುತ್ತಿದ್ದರೂ ತಹಸೀಲ್ದಾರರು ನಮ್ಮ ಹೋರಾಟಕ್ಕೆ ಬೆಲೆ ನೀಡಿಲ್ಲ. ಕನಿಷ್ಠಪಕ್ಷ ಸಮಸ್ಯೆ ಕುರಿತು ನಮ್ಮ ಜೊತೆ ಚರ್ಚಿಸಿಲ' ಎಂದು ಶ್ರೀರಾಮ ಸೇನೆ ಕಾರ್ಯಕರ್ತ ಬಸವರಾಜ ಚಕ್ರಸಾಲಿ ಆರೋಪಿಸಿದರು. ಈ ಸಂದರ್ಭದಲ್ಲಿ ಶ್ರೀರಾಮ ಸೇನೆಯ ತಾಲೂಕು ಘಟಕದ ಅಧ್ಯಕ್ಷ ಈರಣ್ಣ ಪೂಜಾರ, ಪ್ರಾಣೇಶ ವ್ಯಾಪಾರಿ, ಕುಮಾರ ನಡಿಗೇರ, ಸತೀಶ ಕುಂಬಾರ, ಹರೀಶ ಗೋಸಾವಿ, ಗೋವಿಂದ ಗೋಸಾವಿ, ಚಿನ್ನು ಹಾಳದೊಟದ, ಅಶೋಕ ಅಯ್ಯನಗೌಡ್ರ ಇದ್ದರು.

ಗದಗ ಅಂಚೆ ವಿಭಾಗದಲ್ಲಿ ಸೇವೆ ಆರಂಭ

ಡಿಜಿಟಲ್ ಲೈಫ್ ಪ್ರಮಾಣಪತ್ರ ಅಭಿಯಾನ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಅಂಚೆ ವಿಭಾಗ, ಭಾರತ ಅಂಚೆ ಪಾವತಿ ಬ್ಯಾಂಕ್ ಮತ್ತು ನಿವೃತ್ತರ ಕಲ್ಯಾಣ ಇಲಾಖೆಯ ಸಹಯೋಗದಲ್ಲಿ, ನಿವೃತ್ತರಿಗಾಗಿ ಡಿಜಿಟಲ್ ಲೈಫ್ ಪ್ರಮಾಣಪತ್ರ (DLC) ಪಡೆಯುವ ಸುಲಭ ಹಾಗೂ ಸುಗಮ ಮಾರ್ಗವನ್ನು ಒದಗಿಸಲು ಡಿಜಿಟಲ್ ಲೈಫ್ ಪ್ರಮಾಣಪತ್ರ ಅಭಿಯಾನವನ್ನು ಪ್ರಾರಂಭಿಸಿದೆ. ಈ ಸೇವೆಯನ್ನು ನಿವೃತ್ತರು ತಮ್ಮ ಮನೆಗಳಲ್ಲಿಯೇ ಅಥವಾ ಹತ್ತಿರದ ಅಂಚೆ ಕಚೇರಿಗೆ ಭೇಟಿ ನೀಡಿ ಪಡೆಯಬಹುದಾಗಿದೆ.

ಈ ಸೇವೆಯಲ್ಲಿ ನಿವೃತ್ತರು ಡಿಜಿಟಲ್ ಲೈಫ್ ಪ್ರಮಾಣಪತ್ರವನ್ನು ಮುಖದ ಗುರುತಿನಲ್ಲಿ ಮಾನ್ಯತಾ (Face Recognition) ಆಪ್ ಅಥವಾ ಬೆರಳಚ್ಚು ಸ್ಕ್ಯಾನಿಂಗ್ software ಮೂಲಕ ಪಡೆಯಬಹುದಾಗಿದೆ. ಈ ಸೇವೆ ಬಳಸಲು ನಿವೃತ್ತರು ತಮ್ಮ ಆಧಾರ್ ಹಾಗೂ ಪಿಂಚಣಿ ವಿವರಗಳನ್ನು ಒದಗಿಸಿ, ಸೇವಾ ಶುಲ್ಕ ರೂ. 70 ನೀಡಬೇಕು. ಪ್ರಕ್ರಿಯೆ ಪೂರ್ಣಗೊಳ್ಳಲು, ನಿವೃತ್ತರು ತಮ್ಮ ಮೊಬೈಲ್‌ಗೆ ಸ್ವೀಕೃತಿ ರಶೀದಿ ಪಡೆಯಲಿದ್ದು, ಎರಡು ದಿನಗಳ ನಂತರ, ಅಧಿಕೃತ ವೆಬ್‌ಸೈಟ್‌ನಲ್ಲಿ ಡಿಜಿಟಲ್ ಲೈಫ್ ಪ್ರಮಾಣಪತ್ರವನ್ನು ಡೌನ್‌ಲೋಡ್ ಮಾಡ ಬಹುದಾಗಿದೆ. 2024ರ ನವೆಂಬರ್ 30ರವರೆಗೆ ಈ ಸೇವೆ ಗದಗ ಅಂಚೆ ವಿಭಾಗದ ಎಲ್ಲಾ ಅಂಚೆ ಕಚೇರಿಗಳಲ್ಲಿ ಲಭ್ಯವಿರುತ್ತದೆ. ಜೊತೆಗೆ, ವಿಶೇಷ ಅಭಿಯಾನಗಳು ರೋಣ ಅಂಚೆ ಕಚೇರಿ-ನವೆಂಬರ್ 8, ಮುಂಡರಗಿ ಅಂಚೆ ಕಚೇರಿ -ನವೆಂಬರ್ 8, ಶಿರಹಟ್ಟಿ ಅಂಚೆ ಕಚೇರಿ -ನವೆಂಬರ್ 16, ಲಕ್ಷ್ಮೇಶ್ವರ ಅಂಚೆ ಕಚೇರಿ-ನವೆಂಬರ್ 16, ಗಜೇಂದ್ರಗಡ ಅಂಚೆ ಕಚೇರಿ -ನವೆಂಬರ್ 25, ನರಗುಂದ ಅಂಚೆ ಕಚೇರಿ -ನವೆಂಬರ್ 25, ಗದಗ ಪ್ರಧಾನ ಅಂಚೆ ಕಛೇರಿ -ನವೆಂಬರ್ 30ರವರೆಗೆ ಎಲ್ಲಾ ಕೆಲಸದ ದಿನಗಳಲ್ಲಿ ನಡೆಯಲಿವೆ.

ಈ ವಿಶೇಷ ಕಾರ್ಯಕ್ರಮಗಳನ್ನು ನಿವೃತ್ತರು ಈ ಸೇವೆ ಸುಲಭವಾಗಿ ಬಳಸುವಂತೆ ಮಾಡಲು ಯೋಜಿಸಲಾಗಿದ್ದು, ಗದಗ ಅಂಚೆ ವಿಭಾಗದ ಅಧೀಕ್ಷಕರು ಎಲ್ಲಾ ನಿವೃತ್ತರಿಗೆ ಈ ಅಭಿಯಾನವನ್ನು ಸದುಪಯೋಗಪಡಿಸಿಕೊಳ್ಳುವಂತೆ ಪ್ರಕಟಣೆ ತಿಳಿಸಿದೆ.

ಕನ್ನಡ ಉಳಿಸುವುದು ಎಲ್ಲರ ಜವಾಬ್ದಾರಿ

■ ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಮನೋರಮಾ ಕಾಲೇಜಿನಲ್ಲಿ ಕರ್ನಾಟಕ ರಾಜ್ಯ ಬರಹಗಾರರ ಸಂಘ ಗದಗ ಜಿಲ್ಲಾ ಘಟಕದ ವತಿಯಿಂದ ಕರ್ನಾಟಕ ರಾಜ್ಯೋತ್ಸವ ಹಾಗೂ ಜಿಲ್ಲಾ ಮಟ್ಟದ ಕವಿಗೋಷ್ಠಿ ಕಾರ್ಯಕ್ರಮ ಆಯೋಜಿಸಲಾಗಿತ್ತು. ಕಾರ್ಯಕ್ರಮ ಉದ್ಘಾಟಿಸಿದ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಆರ್.ಎಸ್. ಬುರಡಿ ಮಾತನಾಡಿ, ಶಾಲಾ ಮಕ್ಕಳ ಜೊತೆ ಮಾತನಾಡುವುದು ಸುಲಭ. ಆದರೆ ಸಾಹಿತಿಗಳು, ಬುದ್ಧಿಜೀವಿಗಳ ಎದುರಿಗೆ ಮಾತನಾಡಬೇಕಾದರೆ ಎಚ್ಚರಿಕೆಯಿಂದ ಮಾತನಾಡಬೇಕಾಗುತ್ತದೆ. ನಮ್ಮ ಸುತ್ತಮುತ್ತಲಿನ ಪರಿಸರದಲ್ಲಿ ಕನ್ನಡ ಕಲಿಸಿ, ಕನ್ನಡ ಉಳಿಸುವುದು ಎಲ್ಲರ ಜವಾಬ್ದಾರಿಯಾಗಿದೆ ಎಂದರು.

ಮುಖ್ಯ ಅತಿಥಿಗಳಾಗಿ ಪಾಲ್ಗೊಂಡ ಮನೋರಮಾ ಕಾಲೇಜ ಪ್ರಾಚಾರ್ಯ ಬಿ.ಎಸ್. ಹಿರೇಮಠ ಮಾತನಾಡಿ, ಕರ್ನಾಟಕ

ಏಕೀಕರಣಕ್ಕೆ ಗದಗ ಜಿಲ್ಲೆಯ ಪಾತ್ರ ಬಹುದೊಡ್ಡದಾಗಿದೆ. ವಿಷೇಶವಾಗಿ ಆಲೂರ ವೆಂಕಟರಾಯರು, ಜಕ್ಕಲಿ ಗ್ರಾಮದ ಅಂದಾನಪ್ಪ ದೊಡ್ಡಮೇಟಿ, ಡಾ. ಎಚ್.ಎನ್. ಹೂಗಾರ, ಸಂಶಿ ಭೂಸನೂರಮಠ, ಡಾ. ಆರ್.ಸಿ. ಹಿರೇಮಠ, ಚನ್ನವೀರ ಕಣವಿ, ಸಾಕಷ್ಟು ಜನ ಕವಿಗಳು, ಕನ್ನಡ ಅಭಿಮಾನಿಗಳು ತ್ಯಾಗದ ಫಲದಿಂದ ಕರ್ನಾಟಕ ಎಂಬ ಹೆಸರು ಬಂದಿದೆ ಎಂದರು

ಕಾರ್ಯಕ್ರಮ ಸಾನ್ನಿಧ್ಯ ವಹಿಸಿದ ಶ್ರೀ ಮ.ನಿ.ಪ್ರ. ಶಾಂತಲಿಂಗ ಸ್ವಾಮಿಗಳು ಮಾತನಾಡಿ, ಎಲ್ಲರೂ ಕನ್ನಡ ಉಳಿಸಿ-ಬೆಳಸಲು ಶ್ರಮವಹಿಸಿ. ಬರಹಗಾರರ ಸಂಘಟನೆ ಎಲ್ಲಾ ಪದಾಧಿಕಾರಿಗಳು ಕವಿಗೋಷ್ಠಿ ಹಮ್ಮಿಕೊಂಡಿರುವುದು ಸಂತಸದ ವಿಚಾರ ಎಂದರು.

ಅಧ್ಯಕ್ಷತೆಯನ್ನು ಬರಹಗಾರರ ಸಂಘದ ಗದಗ ಜಿಲ್ಲಾ ಘಟಕದ ಅಧ್ಯಕ್ಷರಾದ ಡಾ. ಕಲಾಶ್ರೀ ಹಾದಿಮನಿ ವಹಿಸಿದ್ದರು. ಈ ಸಂದರ್ಭದಲ್ಲಿ ಮನೋರಮಾ ಕಾಲೇಜ್ ಚೇರಮನ್ ಎನ್.ಎಮ್. ಕುಡತರಕರ, ಆಡಳಿತಾಧಿಕಾರಿಗಳಾದ ಕಿಶೋರ ಮುದಗಲ್ಲ, ಪ್ರೊ. ಶರಣು ಪೂಜಾರ, ಶರಣ ಸಾಹಿತ್ಯ ಪರಿಷತ್ತ ಜಿಲ್ಲಾಧ್ಯಕ್ಷರಾದ ಕೆ.ಎ. ಬಳಿಗಾರ, ಸಾಹಿತಿ ಆಡಿನ, ಗುರುಗಳಾದ ಜೋಗಿನ, ಜ್ಯೋತಿ, ಸಾಹಿತಿಗಳ

ಕರವೇ ಜಿಲ್ಲಾ ಪ್ರಧಾನ ಕಾರ್ಯದರ್ಶಿಯಾಗಿ ನೇಮಕ

■ ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ರಕ್ಷಣಾ ವೇದಿಕೆಯ ಗದಗ ಜಿಲ್ಲಾ ಘಟಕದ ಜಿಲ್ಲಾ ಪ್ರಧಾನ ಕಾರ್ಯದರ್ಶಿಯನ್ನಾಗಿ ಬಸವರಾಜ ಹೊಗೆಸೊಪ್ಪಿನ ಅವರನ್ನು ಕರ್ನಾಟಕ ರಕ್ಷಣಾ ವೇದಿಕೆಯ ಗದಗ ಜಿಲ್ಲಾಧ್ಯಕ್ಷ ಹನಮಂತಪ್ಪ ಎಚ್. ಅಬ್ಬಿಗೇರಿ ನೇಮಕ ಮಾಡಿ ಆದೇಶ ಹೊರಡಿಸಿದ್ದಾರೆ.

ಕನ್ನಡ ಭಾಷೆ, ನೆಲ, ಜಲ, ನಾಡು, ನುಡಿಗಾಗಿ ಹೋರಾಟಗಳಲ್ಲಿ ಹಾಗೂ ಅನ್ಯಾಯದ ವಿರುದ್ಧ ಹೋರಾಟಗಳಲ್ಲಿ ಪಾಲ್ಗೊಂಡು ಗದಗ ಜಿಲ್ಲೆಯಲ್ಲಿ ಸಂಘಟನೆಯನ್ನು ಬಲಪಡಿಸಬೇಕೆಂದು ಸೂಚಿಸಿದ್ದಾರೆ.

ಸೂರ್ಯಕಾಂತಿ ಖರೀದಿ ಕೇಂದ್ರ ಪ್ರಾರಂಭ

■ ವಿಜಯಸಾಕ್ಷಿ ಸುದ್ದಿ, ಮುಂಡರಗಿ

ನಗರದ ಎ.ಪಿ.ಎಂ.ಸಿಯಲ್ಲಿ ಸರ್ಕಾರದ ಸೂರ್ಯಕಾಂತಿ ಬೆಂಬಲ ಬೆಲೆ ಯೋಜನೆ-2024 ಅಡಿಯಲ್ಲಿ ಕಲಕೇರಿ ಎಣ್ಣೆ ಬೀಜ ಬೆಳೆಗಾರರ ಸಂಸ್ಕರಣಾ ಸಹಕಾರ ಸಂಘದ ಮೂಲಕ ರೈತರು ಬೆಳೆದ ಸೂರ್ಯಕಾಂತಿ ಖರೀದಿಗೆ ಮುಂಡರಗಿ ತಾಲೂಕಿನ ತಹಸೀಲ್ದಾರ ಎರಿಸ್ವಾಮಿ ಪಿ.ಎಸ್ ಚಾಲನೆ ನೀಡಿದರು.

ಈ ಸಂದರ್ಭದಲ್ಲಿ ಮುಂಡರಗಿ ಟಿ.ಎ.ಪಿ.ಸಿ.ಎಂ.ಎಸ್‌ನ ಅಧ್ಯಕ್ಷ ಮುದುಕನಗೌಡ ಎಸ್.ಪಾಟೀಲ, ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ ಕಾರ್ಯದರ್ಶಿ ಜೈ ರಾಘವೇಂದ್ರ, ಎಣ್ಣೆ ಬೀಜ ಬೆಳೆಗಾರರ ಸಂಸ್ಕರಣಾ ಸಹಕಾರ ಸಂಘದ ಅಧ್ಯಕ್ಷ ಯಂಕಪ್ಪ ಹುಳಕಣ್ಣವರ, ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ಅಧ್ಯಕ್ಷ ಶಿವನಗೌಡ ಪಾಟೀಲ, ಗದಗ ವಿಭಾಗ ಮಟ್ಟದ ಅಧ್ಯಕ್ಷರು ಹಾಗೂ ವಕೀಲರಾದ ಮಲ್ಲನಗೌಡ ಪಾಟೀಲ, ಮುಂಡರಗಿ ಟಿ.ಎ.ಪಿ.ಸಿ.ಎಂ.ಎಸ್‌ನ ಮುಖ್ಯ ಕಾರ್ಯನಿರ್ವಾಹಕ ಸಿದ್ದಣ್ಣ ತಳಕಲ್ಲ, ಮುಖ್ಯ ಕಾರ್ಯನಿರ್ವಾಹಕ ರಾಜಾಭಕ್ಷಿ ಹಲ್ಕಾಪೂರ, ಬಸವರಾಜ್ ಎಲಿಗಾರ, ಎನ್.ಎ. ಖತೀಬ, ರೈತ ಮುಖಂಡರಾದ ಶಿವಾನಂದ ಇಟಗಿ, ಹಿರೇಗೌಡರ್, ರವಿ ಭಂಡಾರಿ, ಮಲ್ಲಿಕಾರ್ಜುನ್ ಭಂಡಾರಿ, ದೇವಪ್ಪ ಮಡಿವಾಳರ, ವಿರೂಪಾಕ್ಷಗೌಡ ಪಾಟೀಲ ಮುಂತಾದವರಿದ್ದರು.

ರೇಷ್ಮೆ ನೂಲು ಬಿಚ್ಚಾಣಿಕೆ ಸಂಘದ ಅಧ್ಯಕ್ಷರ ಆಯ್ಕೆ

■ ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಶಿರಹಟ್ಟಿಯ ಶ್ರೀ ಫಕೀರೇಶ್ವರ ರೇಷ್ಮೆ ನೂಲು ಬಿಚ್ಚಾಣಿಕೆದಾರರ ಹಾಗೂ ರೇಷ್ಮೆ ಕರಕುಶಲ ವಸ್ತು ತಯಾರಿಕೆದಾರರ ಸಹಕಾರಿ ಸಂಘದ ಮುಂದಿನ 5 ವರ್ಷಗಳ ಅವಧಿಗೆ ಅಧ್ಯಕ್ಷರಾಗಿ ಗಣ್ಯ ಉದ್ಯಮಿ ಚಂದ್ರಕಾಂತ ಅಕ್ಕಿ ಮತ್ತು ಅಹಮ್ಮದ ಪಾಶಾ ಉಪಾಧ್ಯಕ್ಷರಾಗಿ ಅವಿರೋಧವಾಗಿ ಆಯ್ಕೆಯಾಗಿದ್ದಾರೆ ಎಂದು ರಿಟರ್ನಿಂಗ್ ಅಧಿಕಾರಿ ಹಾಗೂ ಸಹಕಾರ ಅಭಿವೃದ್ಧಿ ಅಧಿಕಾರಿ ಕೆ.ಸಿ. ಕೂಸನೂರಮಠ ಘೋಷಿಸಿದ್ದಾರೆ.

ಪತ್ರಿಕಾಗೋಷ್ಠಿಯಲ್ಲಿ ಸಚಿವ, ಶತಮಾನೋತ್ಸವ ಸಮಿತಿಯ ಅಧ್ಯಕ್ಷ ಎಚ್.ಕೆ. ಪಾಟೀಲ ಮಾಹಿತಿ

ಅಧಿವೇಶನದ ಇತಿಹಾಸ ಮರುಸೃಷ್ಟಿಗೆ ಸಿದ್ಧತೆ

■ ವಿಜಯಸಾಕ್ಷಿ ಸುದ್ದಿ, ಬೆಳಗಾವಿ

ಬೆಳಗಾವಿಯಲ್ಲಿ 1924ರಲ್ಲಿ ಜರುಗಿದ ಕಾಂಗ್ರೆಸ್ ಅಧಿವೇಶನನಕ್ಕೆ ನೂರು ವರ್ಷಗಳು ಪೂರ್ಣಗೊಳ್ಳುತ್ತಿರುವ ಹಿನ್ನೆಲೆಯಲ್ಲಿ ಶತಮಾನೋತ್ಸವ ಸಮಿತಿ ಸಭೆಯ ತರುವಾಯ ನಗರದ ಪ್ರವಾಸಿ ಮಂದಿರದಲ್ಲಿ ಮಂಗಳವಾರ ಶತಮಾನೋತ್ಸವ ಸಮಿತಿಯ ಅಧ್ಯಕ್ಷರೂ ಆಗಿರುವ ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಪ್ರವಾಸೋದ್ಯಮ ಇಲಾಖೆಯ ಸಚಿವ ಎಚ್.ಕೆ. ಪಾಟೀಲ ಪತ್ರಿಕಾಗೋಷ್ಠಿ ನಡೆಸಿ, ಬೆಳಗಾವಿಯಲ್ಲಿ 1924ರಲ್ಲಿ ಜರುಗಿದ ಕಾಂಗ್ರೆಸ್ ಅಧಿವೇಶನನಕ್ಕೆ ನೂರು ವರ್ಷಗಳು ಪೂರ್ಣಗೊಳ್ಳುತ್ತಿರುವ ಹಿನ್ನೆಲೆಯಲ್ಲಿ ಹಮ್ಮಿಕೊಳ್ಳಲು ಯೋಜಿಸಿರುವ ಸಿದ್ಧತೆಗಳ ಕುರಿತು ಮಾಹಿತಿ ನೀಡಿದರು.

ಮಹಾತ್ಮ ಗಾಂಧೀಜಿಯವರ ಅಕ್ಷತೆಯಲ್ಲಿ 1924ರಲ್ಲಿ ಕಾಂಗ್ರೆಸ್ ಅಧಿವೇಶನದ ಶತಮಾನ ಆಚರಣೆ ಮೂಲಕ ಗಾಂಧೀಜಿಯವರ ತತ್ವ-ಸಿದ್ಧಾಂತಗಳನ್ನು ಇನ್ನಷ್ಟು ಪ್ರಚುಪಡಿಸಲು ಹಾಗೂ ಮನೆ ಮನೆಗೆ ಗಾಂಧೀಜಿ ಸಿದ್ಧಾಂತಗಳನ್ನು ತಲುಪಿಸುವ ಉದ್ದೇಶದಿಂದ 'ಗಾಂಧೀ ಭಾರತ' ಕಾರ್ಯಕ್ರಮ ಆಯೋಜಿಸಲಾಗುತ್ತಿದೆ ಎಂದರು.

ಅರ್ಥಪೂರ್ಣ, ರಚನಾತ್ಮಕ ಕಾರ್ಯಕ್ರಮ ಆಯೋಜಿಸಲು ಗಾಂಧೀವಾದಿಗಳು, ಹಿರಿಯರ ಜತೆ ಚರ್ಚಿಸಿ ಅಧಿವೇಶನದ ಇತಿಹಾಸ ಮರುಸೃಷ್ಟಿ ಮತ್ತು ಮೆಲುಕು ಹಾಕಲು ಶತಮಾನೋತ್ಸವ ಆಚರಣೆ ಮಾಡಲಾಗುವುದು. ಅಧಿವೇಶನಕ್ಕೆ ಸಾಕ್ಷಿಯಾದ ಸ್ಥಳಗಳಿಗೆ ಭೇಟಿ ನೀಡಿ, ವಿಸ್ತೃತವಾಗಿ ಚರ್ಚಿಸಿದ ಬಳಿಕ ಕಾರ್ಯಕ್ರಮದ ರೂಪುರೇಷೆ ಸಿದ್ಧಪಡಿಸಲಾಗುವುದು ಎಂದು ವಿವರಿಸಿದರು.

ಅಕ್ಟೋಬರ್ 2ರಿಂದ ಒಂದು ವರ್ಷದ ಕಾಲ ಶತಮಾನೋತ್ಸವ ವರ್ಷಾಚರಣೆ, ಅಂತಾರಾಷ್ಟ್ರೀಯ ಮಹತ್ವ ಪಡೆಯಲು ವಿಧಾನಮಂಡಳ ಜಂಟಿ ಅಧಿವೇಶನ ನಡೆಸಲು ಹಾಗೂ ಅಮೆರಿಕಾ ಮಾಜಿ ಅಧ್ಯಕ್ಷ ಬರಾಕ್ ಒಬಾಮಾ ಅವರನ್ನು ಕರೆಸಲು ಉದ್ದೇಶಿಸಲಾಗಿದೆ ಎಂದು ಸಚಿವರು ವಿವರಿಸಿದರು.

ಕಾಂಗ್ರೆಸ್ ಅಧಿವೇಶನ ಶತಮಾನೋತ್ಸವ ಆಚರಣೆಗೆ ಸರಕಾರ 25 ಕೋಟಿ ರೂಪಾಯಿ ನೀಡಲಿದ್ದು, ಅಗತ್ಯ ಬಿದ್ದರೆ ಹೆಚ್ಚುವರಿ ಹಣ ನೀಡಲಿದೆ ಎಂದು ಸಚಿವರಾದ ಎಚ್.ಕೆ. ಪಾಟೀಲ ವಿಶ್ವಾಸ ವ್ಯಕ್ತಡಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಹಾಗೂ ಮಾಜಿ ಮುಖ್ಯಮಂತ್ರಿಗಳು ಮತ್ತು 1924ರಲ್ಲಿ ಮಹಾತ್ಮ ಗಾಂಧೀಜಿಯವರ ಅಧ್ಯಕ್ಷತೆಯಲ್ಲಿ ನಡೆದ ಐತಿಹಾಸಿಕ ಕಾಂಗ್ರೆಸ್ ಅಧಿವೇಶನಕ್ಕೆ ಸಾಕ್ಷಿಯಾದ ಸ್ಥಳಗಳಿಗೆ ಭೇಟಿ ನೀಡಿದ ಸಂದರ್ಭದಲ್ಲಿ ಶತಮಾನೋತ್ಸವ ಸಮಿತಿಯ ಅಧ್ಯಕ್ಷರಾದ ಎಚ್.ಕೆ. ಪಾಟೀಲ, ಗೌರವ ಅಧ್ಯಕ್ಷರಾದ ಮಾಜಿ ಮುಖ್ಯಮಂತ್ರಿ ವೀರಪ್ಪ ಮೊಯ್ಲಿ ಹಾಗೂ ಸಮಿತಿಯ ರಾಜ್ಯ ಸಂಚಾಲಕ, ವಿಧಾನ ಪರಿಷತ್ ಮಾಜಿ ಸಭಾಪತಿ ಬಿ.ಎಲ್. ಶಂಕರ, ಸದಸ್ಯರಾದ ಎನ್.ಆರ್. ವಿಶುಕುಮಾರ್, ಬೆಳಗಾವಿ ಉತ್ತರ ಮತಕ್ಷೇತ್ರದ ಶಾಸಕರಾದ ಆಸಿಫ್(ರಾಜು) ಸೇಠ್ ಮತ್ತಿತರರು ಉಪಸ್ಥಿತರಿದ್ದರು.

> ಗಾಂಧೀಜಿಯವರ ಕುರಿತು ವಿಶೇಷ ಅಭಿಮಾನ ಹೊಂದಿರುವ ಒಬಾಮಾ ಅವರು ಜಂಟಿ ಅಧಿವೇಶನ ಉದ್ದೇಶಿಸಿ ಮಾತನಾಡಬೇಕು ಎಂಬುದು ಎಲ್ಲರ ಆಶಯವಾಗಿದೆ. ಈ ಬಗ್ಗೆ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಈಗಾಗಲೇ ಬರಾಕ್ ಒಬಾಮಾ ಅವರನ್ನು ಆಹ್ವಾನಿಸಿ ಪತ್ರವನ್ನು ಬರೆದಿದ್ದಾರೆ. ಡಿಸೆಂಬರ್ 26-27 ಅಥವಾ ಜನವರಿ-2025ರಿಂದ ಅಕ್ಟೋಬರ್-2025ರ ಒಳಗಾಗಿ ದಿನಾಂಕ ನೀಡಲು ಕೋರಲಾಗಿದ್ದು, ಜಂಟಿ ಅಧಿವೇಶನವನ್ನು ಬೆಳಗಾವಿಯಲ್ಲಿಯೇ ನಡೆಸಲಾಗುವುದು ಎಂದು ಸಚಿವ ಎಚ್.ಕೆ. ಪಾಟೀಲ ಮಾಹಿತಿ ನೀಡಿದರು.

ಸರ್ಕಾರಿ ಇಲಾಖೆಯ ಅಧಿಕಾರಿ, ನೌಕರರಿಗೆ ಸೂಕ್ತ ರಕ್ಷಣೆ ಒದಗಿಸಲು ಮನವಿ

ತಪ್ಪಿತಸ್ಥರ ವಿರುದ್ಧ ಕ್ರಮ ಕೈಗೊಳ್ಳಿ

■ ವಿಜಯಸಾಕ್ಷಿ ಸುದ್ದಿ, ಗದಗ

ಸಾರ್ವಜನಿಕ ಸೇವೆಯಲ್ಲಿ ನಿರತರಾಗಿರುವ ಇಲಾಖೆಯ ಅಧಿಕಾರಿಗಳು, ನೌಕರರಿಗೆ ಸೂಕ್ತ ರಕ್ಷಣೆಯನ್ನು ಒದಗಿಸಲು ಮತ್ತು ತಪ್ಪಿತಸ್ಥರ ವಿರುದ್ಧ ಕ್ರಮ ಕೈಗೊಳ್ಳುವಂತೆ ಆಗ್ರಹಿಸಿ ರಾಜ್ಯ ಸರಕಾರಿ ನೌಕರರ ಸಂಘದ ರಾಜ್ಯ ಉಪಾಧ್ಯಕ್ಷ ಹಾಗೂ ಜಿಲ್ಲಾ ಘಟಕದ ಅಧ್ಯಕ್ಷ ರವಿ ಗುಂಜೀಕರ ನೇತೃತ್ವದಲ್ಲಿ ಸರಕಾರಿ ನೌಕರರು ಜಿಲ್ಲಾಧಿಕಾರಿ ಗೋವಿಂದರೆಡ್ಡಿ ಅವರಿಗೆ ಮಂಗಳವಾರ ಮನವಿ ಸಲ್ಲಿಸಿದರು.

ನ. 4ರಂದು ಗಜೇಂದ್ರಗಡ ಶಹರದಲ್ಲಿ ರಾಜ್ಯದ ರೈತರ, ದೇವಾಲಯ ಹಾಗೂ ಮಠ-ಮಾನ್ಯಗಳ ಆಸ್ತಿಗಳ ಮೇಲೆ

ವಕ್ಫ್ ಬೋರ್ಡ್ ಹೆಸರು ದಾಖಲಿಸುತ್ತಿರುವ ರಾಜ್ಯ ಸರಕಾರದ ನಡೆ ಖಂಡಿಸಿ ರಾಜ್ಯ ಬಿಜೆಪಿ ಕರೆ ನೀಡಿದ್ದ ಪ್ರತಿಭಟನೆ ಅಂಗವಾಗಿ ಮಾಜಿ ಸಚಿವ, ಮಾಜಿ ಶಾಸಕ ಕಳಕಪ್ಪ ಬಂಡಿ ಅವರ ನೇತೃತ್ವದಲ್ಲಿ ಬಿಜೆಪಿ ಕಾರ್ಯಕರ್ತರು ಪ್ರತಿಭಟಿಸಿ ತಹಸೀಲ್ದಾರರಿಗೆ ಮನವಿ ಸಲ್ಲಿಸಲು ಕಚೇರಿ ಮುಂದೆ ಬಂದು ಕರ್ತವ್ಯನಿರತ ತಹಸೀಲ್ದಾರ ಹಾಗೂ ತಾಲೂಕು ದಂಡಾಧಿಕಾರಿ ಕಿರಣಕುಮಾರ ಕುಲಕರ್ಣಿ ಅವರಿಗೆ ಸಾರ್ವಜನಿಕರ ಎದುರಿಗೆ ವೈಯಕ್ತಿಕವಾಗಿ ಏಕವಚನದಿಂದ ನಿಂದಿಸಿ, ಕಂದಾಯ ಇಲಾಖೆಯ ಅಧಿಕಾರಿಗಳಿಗೆ, ನೌಕರರಿಗೆ ಸರ್ಕಾರಿ ಕರ್ತವ್ಯ ನಿರ್ವಹಿಸಲು ತೊಂದರೆಯುಂಟು ಮಾಡಿದ್ದಾರೆ ಎಂದು ಆರೋಪಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ಗೌರವಾಧ್ಯಕ್ಷ ಬಸವರಾಜ ಬಳ್ಳಾರಿ, ತಹಸೀಲ್ದಾರ ಶ್ರೀನಿವಾಸಮೂರ್ತಿ ಕುಲಕರ್ಣಿ, ವಿ.ಎಂ. ಹಿರೇಮಠ, ಎಸ್.ಆರ್. ಬಂಡಿ, ಡಿ.ಟಿ. ವಾಲ್ಮೀಕಿ, ಅರುಣ ಮಂಟೂರ, ಕೆ.ಬಿ. ಕೊಣ್ಣೂರ, ಎಸ್.ಎಂ. ಹಿರೇಮಠ, ಎಂ.ಎ. ನದಾಫ್, ಎನ್.ಬಿ. ದೊಡ್ಡಮನಿ, ಸಿ.ಎಸ್. ಮಠದ, ಪಿ.ಬಿ. ಮುಧೋಳಮಠ, ಪಿ.ಎಫ್. ಅಗಸಿಮನಿ ಸೇರಿದಂತೆ ಸಂಘದ ಜಿಲ್ಲಾ ಪದಾಧಿಕಾರಿಗಳು, ಸದಸ್ಯರು, ಸರಕಾರಿ ನೌಕರರು ಹಾಜರಿದ್ದರು.

> ಸರ್ಕಾರದ ನಿಯಮಗಳಿಗೆ ಅನುಗುಣವಾಗಿ ಕರ್ತವ್ಯ ನಿರ್ವಹಿಸುತ್ತಿರುವ ಕಂದಾಯ ಇಲಾಖೆಯ ಅಧಿಕಾರಿಗಳಿಗೆ, ನೌಕರರಿಗೆ ತೊಂದರೆ ನೀಡಿ, ನಿಷ್ಪಕ್ಷಪಾತವಾಗಿ ಸರ್ಕಾರಿ ಕರ್ತವ್ಯ ನಿರ್ವಹಿಸಲು ಮಾನಸಿಕವಾಗಿ ಮತ್ತು ನೈತಿಕವಾಗಿ ಕುಗ್ಗಿಸುವ ರೀತಿಯಲ್ಲಿ ನಡೆದುಕೊಂಡಿದ್ದು ಖೇದಕರ ವಿಷಯವಾಗಿದೆ. ಸಾರ್ವಜನಿಕ ಸೇವೆಯಲ್ಲಿ ನಿರತರಾಗಿರುವ ಇಲಾಖೆಯ ಅಧಿಕಾರಿ, ನೌಕರರಿಗೆ ಸೂಕ್ತ ರಕ್ಷಣೆಯನ್ನು ಒದಗಿಸಬೇಕು ಮತ್ತು ತಪ್ಪಿತಸ್ಥರ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು..

ಬಾಲಕಾರ್ಮಿಕ ಕಾರ್ಮಿಕರ ರಕ್ಷಣಾ ಕಾರ್ಯಚರಣೆ

ಬಾಲಕಾರ್ಮಿಕ, ಕಿಶೋರ ಕಾರ್ಮಿಕ ಪತ್ತೆ

■ ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ

ರಾಷ್ಟ್ರೀಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗ ಹಾಗೂ ಸಹಾಯಕ ಕಾರ್ಮಿಕ ಆಯುಕ್ತರ ನಿರ್ದೇಶನದಂತೆ ಮಂಗಳವಾರ ಬಾಲಕಾರ್ಮಿಕ ಹಾಗೂ ಕಿಶೋರ ಕಾರ್ಮಿಕ ರಕ್ಷಣಾ ಕಾರ್ಯಾಚರಣೆಯನ್ನು ಹುಬ್ಬಳ್ಳಿ ಶಹರದ ಕೋಪ್ಪಿಕರ ರಸ್ತೆ, ದಾಜೀಬಾನ ಪೇಠ ಮತ್ತು ಮ್ಯಾದಾರ ಓಣಿ ಪ್ರದೇಶದ ವಿವಿಧೆಡೆ ತಪಾಸಣೆ ಹಾಗೂ ಜಾಗೃತಿ ಕಾರ್ಯಕ್ರಮಗಳನ್ನು ಆಯೋಜಿಸಲಾಗಿತ್ತು.

ಶಹರದಲ್ಲಿರುವ ಅಂಗಡಿ, ಗ್ಯಾರೇಜ್, ಬೇಕರಿ, ಹೋಟೆಲ್, ವಾಣಿಜ್ಯ ಸಂಸ್ಥೆಗಳಲ್ಲಿ ಕೆಲಸ ಮಾಡುತ್ತಿರುವ ಬಾಲ ಕಾರ್ಮಿಕ ಮತ್ತು ಕಿಶೋರ ಕಾರ್ಮಿಕರ ತಪಾಸಣೆ ನಡೆಸಲಾಯಿತು. ಸಂಸ್ಥೆಯ ಮಾಲಿಕರಿಗೆ ಬಾಲಕಾರ್ಮಿಕ ಮತ್ತು ಕಿಶೋರ ಕಾರ್ಮಿಕ (ನಿಷೇಧ ಮತ್ತು ನಿಯಂತ್ರಣ) ಕಾಯ್ದೆ 1986ರ ಕುರಿತು ಜಾಗೃತಿ ಮೂಡಿಸಲಾಯಿತು. ನಿಯಮ ಬಾಹಿರವಾಗಿ ಮಕ್ಕಳನ್ನು ನೇಮಿಸಿಕೊಂಡಲ್ಲಿ ರೂ. 20ರಿಂದ 50 ಸಾವಿರ ರೂ.ವರೆಗೆ ದಂಡ, ಇಲ್ಲವೇ ಕನಿಷ್ಠ 6 ತಿಂಗಳಿಂದ ಎರಡು ವರ್ಷಗಳವರೆಗೆ ಜೈಲು ಶಿಕ್ಷೆ ವಿಧಿಸಲಾಗುವುದು ಎಂದು ಮಾಲಿಕರಿಗೆ ಹಾಗೂ ಸಾರ್ವಜನಿಕರಿಗೆ ಕಾಯ್ದೆ ಕುರಿತು ಜಾಗೃತಿ ಮೂಡಿಸಲಾಯಿತು.

ಈ ಸಂದರ್ಭದಲ್ಲಿ ಕೋಪ್ಪಿಕರ ರಸ್ತೆಯ ನ್ಯಾಶನಲ್ ಮಾರ್ಕೆಟ್‌ನಲ್ಲಿ ಕೆಲಸ ಮಾಡುತ್ತಿದ್ದ 1 ಬಾಲಕಾರ್ಮಿಕ, 1 ಕಿಶೋರ ಕಾರ್ಮಿಕ ಪತ್ತೆ ಆಗಿದ್ದು, ಈ ಮಕ್ಕಳನ್ನು ಮುಖ್ಯವಾಹಿನಿಗೆ ದಾಖಲಿಸಿ ಮಾಲೀಕರ ವಿರುದ್ಧ ಕ್ರಮ ಕೈಗೊಳ್ಳಲಾಗುತ್ತಿದೆ.

ಈ ಕಾರ್ಯಚರಣೆಯಲ್ಲಿ ಹಿರಿಯ ಕಾರ್ಮಿಕ ನಿರೀಕ್ಷಕರಾದ ಅಶೋಕ ಒಡೆಯರ, ರಜನಿ ಹಿರೇಮಠ, ಜಿಲ್ಲಾ ಬಾಲಕಾರ್ಮಿಕ ಯೋಜನಾ ನಿರ್ದೇಶಕ ಬಸವರಾಜ ಪಂಚಾಕ್ಷರಿಮಠ, ಪೊಲೀಸ್ ಸಿಬ್ಬಂದಿ, ಎಸ್.ಎನ್. ಚೋಳಿನ, ಶಿಕ್ಷಣ ಇಲಾಖೆಯ ಬಿಆರ್‌ಪಿ ಬಿ.ವಾಚಿಸ್.ಅಂಬಿಗೇರ ಹಾಗೂ ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಸಾಮಾಜಿಕ ಕಾರ್ಯಕರ್ತ ವಿಶಾಲ ಭಾಗವಹಿಸಿದ್ದರು.

ತಾಲೂಕಾ ಕೃಷಿಕ ಸಮಾಜದ ಚುನಾವಣೆ

■ ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

2024-25ನೇ ಸಾಲಿನಲ್ಲಿ ಶಿರಹಟ್ಟಿ ತಾಲೂಕಿನ ಕರ್ನಾಟಕ ಪ್ರದೇಶ ಕೃಷಿಕ ಸಮಾಜದ 5 ವರ್ಷಗಳ ಅವಧಿಗೆ ಕಾರ್ಯಕಾರಿ ಸಮಿತಿ ರಚನೆ ಹಾಗೂ ಪದಾಧಿಕಾರಿಗಳ ಆಯ್ಕೆಗೆ ತಾಲೂಕು ಮಟ್ಟದ ಕೃಷಿಕ ಸಮಾಜದ ಚುನಾವಣೆಯನ್ನು ಡಿ.15ರಂದು ಬೆಳಿಗ್ಗೆ 8 ಗಂಟೆಯಿಂದ ಮಧ್ಯಾಹ್ನ 2 ಗಂಟೆಯವರೆಗೆ ನಿಗದಿಪಡಿಸಿದೆ. ತಾಲೂಕು ಕೃಷಿಕ ಸಮಾಜದ ಆಜೀವ ಸದಸ್ಯರ ಪಟ್ಟಿಯನ್ನು ಶಿರಹಟ್ಟಿ ಸಹಾಯಕ ಕೃಷಿ ನಿರ್ದೇಶಕರ ಕಚೇರಿಯ ಸೂಚನಾ ಫಲಕದಲ್ಲಿ ಪ್ರಕಟಿಸಿದ್ದು, ಈ ಪಟ್ಟಿಯಲ್ಲಿ ತಿದ್ದುಪಡಿಗಳಿದ್ದಲ್ಲಿ ನ.12ರ ಒಳಗೆ ಕರ್ನಾಟಕ ಪ್ರದೇಶ ಕೃಷಿಕ ಸಮಾಜ, ನಂ.18, ಕೃಷಿ ಭವನ ನೃಪತುಂಗ ರಸ್ತೆ-ಬೆಂಗಳೂರು ಇಲ್ಲಿಗೆ ತಲುಪುವಂತೆ ಅರ್ಜಿ ಸಲ್ಲಿಸಬಹುದಾಗಿದೆ ಎಂದು ಸಹಾಯಕ ಕೃಷಿ ನಿರ್ದೇಶಕ ರೇವಣಪ್ಪ ಮನಗೂಳಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಕರ್ನಾಟಕ ಸರಕಾರ

ಗ್ರಾಮ ಪಂಚಾಯತ ಕಾರ್ಯಾಲಯ ಬಿಂಕದಕಟ್ಟಿ

ತಾಲೂಕ :-ಗದಗ **ಜಿಲ್ಲಾ:-ಗದಗ**

E-mail: binkadakatti.gad.gdg@gmail.com

ಕ್ರಮ ಸಂಖ್ಯೆ: ಗ್ರಾಪಂಬಿ/ಮ.ಗಾಂ.ರಾ.ಗ್ರಾ.ಉ.ಖಾ.ಯೋಜನೆ/ದರಪಟ/2024-25 ದಿನಾಂಕ: 05-11-2024

-: ದರಪಟ್ಟಿ ಪ್ರಕಟಣೆ :-

ಅಧ್ಯಕ್ಷರು/ಅಭಿವೃದ್ಧಿ ಅಧಿಕಾರಿಗಳು ಗ್ರಾಮ ಪಂಚಾಯತ ಬಿಂಕದಕಟ್ಟಿ ಇವರು 2024-25ನೇ ಸಾಲಿನ ಮಹಾತ್ಮಾ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆ ಅಡಿಯಲ್ಲಿ ಈ ಕೆಳ ಕಂಡ ಕಾಮಗಾರಿಗೆ ಅವಶ್ಯಕವಿರುವ ಐಟಂವಾರು ಸಾಮಗ್ರಿ ಮೊತ್ತಕ್ಕೆ ಸಾಮಗ್ರಿಗಳನ್ನು ಪೂರೈಸಲು ನೋಂದಾಯಿತ ಅರ್ಹ ವೆಂಡರ್/ ಏಜೆನ್ಸಿಗಳಿಂದ ದರಪಟ್ಟಿಗಳನ್ನು ಆಹ್ವಾನಿಸಲಾಗಿದೆ. ಸದರಿ ಕಾಮಗಾರಿಗಳಿಗೆ ದರಪಟ್ಟಿ ಸಲ್ಲಿಸುವವರು ಗ್ರಾಮ ಪಂಚಾಯತಿಯಿಂದ ಖುದ್ದಾಗಿ ಖಾಲಿ ಟೆಂಡರ್ ಫಾರ್ಮಗಳನ್ನು ಪಡೆದು ಸಲ್ಲಿಸತಕ್ಕದ್ದು.

ಕ್ರ.ಸಂ.	ಕಾಮಗಾರಿಗಳ ಹೆಸರು	ಟೆಂಡರ್ ಮೊತ್ತ	ಖಾಲಿ ಟೆಂಡರ್ ಫಾರಂ ಬೆಲೆ (ರೂ.ಗಳಲ್ಲಿ)	ಷರಾ
1	ಬಿಂಕದಕಟ್ಟಿ ಗ್ರಾಮದ ಮಳಗಿಯವರ ಪ್ಲಾಟನಲ್ಲಿರುವ ಅಸುಂಡಿ ಮುಖ್ಯ ರಸ್ತೆಯಿಂದ ಶರಣಪ್ಪ ದೇವಗಿರಿ ಮನೆ ವರೆಗೆ ಸಿ ಸಿ ರಸ್ತೆ	141920.00	500	ಗ್ರಾಮ ಪಂಚಾಯತಿ ಬಿಂಕದಕಟ್ಟಿ ಯಲ್ಲಿ ದರಪಟ್ಟಿ ಸಲ್ಲಿಸುವುದು
2	ಹಿರೇಹಂದಿಗೋಳ ಗ್ರಾಮದ ಗೌಡನಾಯ್ಕರ ಮನೆಯಿಂದ ದ್ಯಾಮವ್ವನ ಗುಡಿವರೆಗೆ ಸಿಸಿ ರಸ್ತೆ ನಿರ್ಮಾಣ.	125777.00	500	
3	ಬಿಂಕದಕಟ್ಟಿ ಗ್ರಾಮದ ಅಶೋಕ ಮೂಲಿಮನಿಯವರ ಜಾಗೆಯಿಂದ ಹುಚ್ಚಣ್ಣವರ ಜಾಗೆಯ ವರೆಗೆ ಸಿ ಸಿ ರಸ್ತೆ ಮುಂದುವರೆದ ಕಾಮಗಾರಿ	295248.00	500	
4	ಹಿರೇಹಂದಿಗೋಳ ಗ್ರಾಮದ ಸರಕಾರಿ ಹಿರಿಯ ಪ್ರಾಥಮಿಕ ಶಾಲಾ ಮೈದಾನ ಅಭಿವೃದ್ಧಿ ಪಡಿಸುವದು	129275.00	500	
5	ಬಿಂಕದಕಟ್ಟಿ ಗ್ರಾಮದ ಮುಂಬಾರಡ್ಡಿ ಪ್ಲಾಟನಲ್ಲಿ ಸಿಸಿ ರಸ್ತೆ ನಿರ್ಮಾಣ	127357.0	500	

ಅರ್ಹ ವೆಂಡರ್/ ಏಜೆನ್ಸಿಗಳಿಂದ ಖ